MAA ಫ್ರೆಂಡ್ಸ್ ಸಾರಥ್ಯದಲ್ಲಿ...

# ಯುವ ಮಾರ್ಗ

YUVA MARGA NEWS PAPER
VOICE OF THE NATION

ಕನ್ನಡ ದಿನಪತ್ರಿಕೆ "ಇದು ರಾಷ್ಟ್ರದ ಧ್ವನಿ"

ಸಂಪಾದಕರು : ಅನಿಲ ಕುಮಾರ್ ಹೆಚ್ Cell : 9743497111

YUVA MARGA KANNADA DAILY NEWS PAPER

ಪ್ರಧಾನ ಸಂಪಾದಕರು : ಮನೋಜ ಮಿಶ್ರಾ Cell : 9743496111

| ಸಂಪುಟ: 04 | ಸಂಚಿಕೆ: 227 | ಮಂಗಳವಾರ : 24-06-2025 | ರಾಯಚೂರು | RNI NO: KARKAN/2022/90446 | ಪುಟ: 4 | ಬೆಲೆ: ರೂ: 2-00 |
|---|---|---|---|---|---|---|
| VOLUME: 04 | ISSUE: 227 | TUESDAY : 24-06-2025 | RAICHUR | EMAIL: YUVAMARGA@GMAIL.COM | PAGE: 4 | PRICE: Rs: 2-00 |

## ರಾಯಚೂರ ಗ್ರಾಮೀಣ ಕ್ಷೇತ್ರದಲ್ಲಿ 936.00 ಕೋಟಿ ರೂ.ಗಳ ವೆಚ್ಚದ ವಿವಿಧ ಕಾಮಗಾರಿಗಳಿಗೆ ಶಂಕುಸ್ಥಾಪನೆ, ಉದ್ಘಾಟನೆ

# ಜನತೆಗೆ ನೀಡಿದ ವಚನದಂತೆ ನಡೆದ ಸರ್ಕಾರ ನಮ್ಮದು: ಸಿಎಂ ಸಿದ್ಧರಾಮಯ್ಯ

**ಯುವ ಮಾರ್ಗ ಸುದ್ದಿ**

**ರಾಯಚೂರ,ಜೂ.23–**ರಾಜ್ಯ ಸರ್ಕಾರವು ಜನತೆಗೆ ವಚನ ಕೊಟ್ಟಂತೆ ನಡೆದುಕೊಂಡ ಸರ್ಕಾರ ನಮ್ಮದು. ಜನರ ಹೊಟ್ಟೆ ತುಂಬಿಸುವ ಅನ್ನಭಾಗ್ಯ ಯೋಜನೆ, ಜನರ ಜೀವನಕ್ಕೆ ಆರ್ಥಿಕ ಸಹಾಯ ಮಾಡುವ ಗೃಹಲಕ್ಷ್ಮಿ, ಗೃಹಜ್ಯೋತಿ ಸೇರಿದಂತೆ ಮಹತ್ವದ ಎಲ್ಲ ಗ್ಯಾರಂಟಿ ಯೋಜನೆಗಳನ್ನು ಸಮರ್ಪಕವಾಗಿ ಅನುಷ್ಠಾನಗೊಳಿಸುತ್ತಿದ್ದೇವೆ ಎಂದು ರಾಜ್ಯದ ಮುಖ್ಯಮಂತ್ರಿಗಳಾದ ಸಿದ್ಧರಾಮಯ್ಯ ಅವರು ಹೇಳಿದರು.

ರಾಯಚೂರು ತಾಲೂಕಿನ ಯರಗೇರಾ ಗ್ರಾಮದ ಶ್ರೀ ರಂಗನಾಥ ಸ್ವಾಮಿ ದೇವಸ್ಥಾನದ ಹತ್ತಿರ ಜೂನ್ 23ರಂದು ಜಿಲ್ಲಾಡಳಿತ, ಜಿಲ್ಲಾ ಪಂಚಾಯತ್ ಹಾಗೂ ಪರಿಶಿಷ್ಟ ಪಂಗಡಗಳ ಕಲ್ಯಾಣ ಇಲಾಖೆ ಇವರ ವತಿಯಿಂದ ನಡೆದ ಬುಡಕಟ್ಟು ಸಾಂಸ್ಕೃತಿಕ ಉತ್ಸವ ಹಾಗೂ 371(ಜೆ) ದಶಮಾನೋತ್ಸವ ಮತ್ತು 936.00 ಕೋಟಿ ರೂ.ಗಳ ವೆಚ್ಚದಲ್ಲಿ ವಿವಿಧ ಕಾಮಗಾರಿಗಳ ಅಡಿಗಲ್ಲು ಹಾಗೂ ಉದ್ಘಾಟನೆ ನೆರವೇರಿಸಿ ಅವರು ಮಾತನಾಡಿದರು.

ಗ್ಯಾರಂಟಿ ಯೋಜನೆಗಳಿಗೆ ನಾವು ಬಜೆಟನಲ್ಲಿ ಅನುದಾನ ಮೀಸಲಿರಿಸಿ ಯೋಜನೆಗಳನ್ನು ಅನುಷ್ಠಾನಗೊಳಿಸುತ್ತಿದ್ದೇವೆ. ಅಧಿಕಾರಕ್ಕೆ ಬಂದು ಎರಡು ವರ್ಷದ ಅವಧಿಯಲ್ಲಿ ನಾವು ಅಂದಾಜು 90,000 ಕೋಟಿ ರೂ.ಗಳನ್ನು ಗ್ಯಾರಂಟಿ ಯೋಜನೆಗಳಿಗೆ ಖರ್ಚು ಮಾಡಿದ್ದೇವೆ. ಚುನಾವಣಾ ಸಂದರ್ಭದಲ್ಲಿ ರಾಜ್ಯ ಸರ್ಕಾರವು 560ಕ್ಕೂ ಹೆಚ್ಚು ಭರವಸೆ ನೀಡಿದ ಪೈಕಿ ನಾವು ಈ ಎರಡು ವರ್ಷಗಳ ಅವಧಿಯಲ್ಲಿ ಈಗಾಗಲೇ 242 ಭರವಸೆಗಳನ್ನು ಈಡೇರಿಸಿದ್ದೇವೆ. ಇನ್ನು ಮೂರ ವರ್ಷದಲ್ಲಿ ಇನ್ನುಳಿದ ಭರವಸೆಗಳನ್ನು ಸಹ ಈಡೇರಿಸುತ್ತೇವೆ ಎಂದು ತಿಳಿಸಿದರು.

ಕಲ್ಯಾಣ ಕರ್ನಾಟಕದ ಭಾಗವು ಶಿಕ್ಷಣ, ಆರೋಗ್ಯ ಕ್ಷೇತ್ರದಲ್ಲಿ ಹಿಂದುಳಿದಿದೆ. ಇದು ಸರಿ ಆಗಬೇಕು. ರಾಜ್ಯ ಸರ್ಕಾರವು ಕಲ್ಯಾಣ ಕರ್ನಾಟಕ ಪ್ರದೇಶಾಭಿವೃದ್ಧಿ ಮಂಡಳಿಯಿಂದ ನಾನಾ ಅಭಿವೃದ್ಧಿ ಕಾಮಗಾರಿಗಳಿಗೆ ಸಾವಿರಾರು ಕೋಟಿ ರೂ ಗಳನ್ನು ನೀಡುತ್ತಿದೆ. ರಾಯಚೂರ ಸೇರಿದಂತೆ ಕಲ್ಯಾಣ ಕರ್ನಾಟಕ ಭಾಗದ



ಪ್ರದೇಶಕ್ಕೆ ಶಿಕ್ಷಣ, ಆರೋಗ್ಯ, ಉದ್ಯೋಗ ಕ್ಷೇತ್ರಗಳಿಗೆ ಹೆಚ್ಚಿನ ಪ್ರಮಾಣದಲ್ಲಿ ಅನುದಾನ ಕೊಡಬೇಕು ಎಂದು ಕೆಕೆಆರ್‌ಡಿಬಿ ಅಧ್ಯಕ್ಷರಿಗೆ ತಿಳಿಸಿದ್ದಾಗಿ ಮುಖ್ಯಮಂತ್ರಿಗಳು ತಿಳಿಸಿದರು.

ವೈದ್ಯಕೀಯ ಶಿಕ್ಷಣ ಹಾಗೂ ಕೌಶಲ್ಯಾಭಿವೃದ್ಧಿ ಉದ್ಯಮಶೀಲತೆ ಮತ್ತು ಜೀವನೋಪಾಯ ಸಚಿವರು ಹಾಗೂ ರಾಯಚೂರು ಜಿಲ್ಲಾ ಉಸ್ತುವಾರಿ ಸಚಿವರಾದ ಡಾ.ಶರಣಪ್ರಕಾಶ್ ರುದ್ರಪ್ಪ ಪಾಟೀಲ್ ಅವರು ಮಾತನಾಡಿ, ಮಹತ್ವದ 371 (ಜೆ) ಜಾರಿ ಮೂಲಕ, ಹಿಂದುಳಿದ ಭಾಗದ ಜನತೆಗೆ ಅನುಕೂಲ ಕಲ್ಪಿಸಲು ಶ್ರಮಿಸಿದ ಹಿರಿಯರಾದ ಮಲ್ಲಿಕಾರ್ಜುನ ಖರ್ಗೆ ಸೇರಿದಂತೆ ನಮ್ಮ ಭಾಗದ ಅನೇಕ ಮಹನಿಯರು ನಮಗೆ ಕಾಮಧೇನು ಮತ್ತು ಕಲ್ಪವೃಕ್ಷ ಆಗಿದ್ದಾರೆ. 371 (ಜೆ) ಜಾರಿಯಿಂದಾಗಿ ಕಲ್ಯಾಣ ಕರ್ನಾಟಕ ಭಾಗದಲ್ಲಿ ನಮ್ಮ ಸಾಧನೆ ಅನನ್ಯವಾಗಿದೆ. 371(ಜೆ) ವಿಶೇಷ ಸ್ಥಾನಮಾನ ಜಾರಿಯಿಂದಾಗಿ ಈ ಭಾಗದಲ್ಲಿ ಎಲ್ಲರಿಗೂ ರಕ್ಷಣೆ ಸಿಗುವಂತಾಗಿದೆ. ಈ ಮೀಸಲು ಸೌಕರ್ಯ ಪಡೆದು ಈ ಭಾಗದ 9 ಸಾವಿರ ಮಕ್ಕಳು ಡಾಕ್ಟರ್ ಆಗಿದ್ದಾರೆ. ಇದೇ ರೀತಿ ಅನೇಕರು ನೌಕರಿ ಗಿಟ್ಟಿಸಿದ್ದಾರೆಂಬುದು ಸಣ್ಣ ಸಾಧನೆಯಲ್ಲ.



ಈ ಭಾಗದ ಎಲ್ಲ ಹುದ್ದೆಗಳಲ್ಲಿ ಶೇ.75 ಹುದ್ದೆಗಳು ನಮ್ಮ ಭಾಗದ ಜನತೆಗೆ ದಕ್ಕಿದೆ. ಇದು ಬಹುದೊಡ್ಡ ಸಾಮಾಜಿಕ ಬದಲಾವಣೆ ಆಗಿದೆ ಎಂದು ತಿಳಿಸಿದರು.ಕಾರ್ಯಕ್ರಮದ ಅಧ್ಯಕ್ಷತೆ ವಹಿಸಿದ್ದ ಕರ್ನಾಟಕ ಮಹರ್ಷಿ ವಾಲ್ಮೀಕಿ ಪರಿಶಿಷ್ಟ ಪಂಗಡಗಳ ಅಭಿವೃದ್ಧಿ ನಿಗಮದ ಅಧ್ಯಕ್ಷರು ಆಗಿರುವ ರಾಯಚೂರು ಗ್ರಾಮಾಂತರ ಕ್ಷೇತ್ರದ ಶಾಸಕರಾದ ಬಸನಗೌಡ ದದ್ದಲ್ ಅವರು ಮಾತನಾಡಿ, ರಾಜ್ಯದಲ್ಲಿ ನಮ್ಮ ಸರ್ಕಾರವು 5 ಗ್ಯಾರಂಟಿ ಯೋಜನೆಗಳನ್ನು ಸಮರ್ಪಕವಾಗಿ ಜಾರಿ ಮಾಡಿ ಜನಪರವಾಗಿ ಕೆಲಸ ಮಾಡುತ್ತಿದೆ. ರಾಯಚೂರ ಜಿಲ್ಲೆಯಲ್ಲಿ ಎರಡು ನದಿಗಳು ಹರಿದಿವೆ. ಆದಾಗ್ಯೂ ರಾಯಚೂರ ಗ್ರಾಮೀಣ ಪ್ರದೇಶದ ನನ್ನ ರೈತಾಪಿ ಜನರಿಗೆ ನೀರು ಸಿಗುತ್ತಿಲ್ಲ. ಮೇಲಿನ ನೀರು ನಮಗು ಸಹ ನ್ಯಾಯಯುತವಾಗಿ ಸಿಗಬೇಕು. ರಾಯಚೂರ ಗ್ರಾಮೀಣ ಕ್ಷೇತ್ರದಲ್ಲಿ ಈಗಾಗಲೇ ನೀರು ಎತ್ತುವ ಎರಡು ಯೋಜನೆಗಳು ಅನುಷ್ಠಾನವಾಗುತ್ತಿವೆ. ಇನ್ನು ಮೂರು ನೀರು ಎತ್ತುವ ನೀರಾವರಿ ಯೋಜನೆಗಳಿಗೆ ಡಿಪಿಆರ್ ಆಗಿದೆ ಎಂದರು.

ನಮ್ಮ ಭಾಗಕ್ಕೆ 371(ಜೆ) ಮೀಸಲು ಸ್ಥಾನಮಾನ ಲಭ್ಯವಾಗಿದ್ದರಿಂದಾಗಿ ನಮ್ಮ ಭಾಗದ ಜನರು ಉದ್ಯೋಗವಕಾಶ 2ನೇ ಪುಟಕ್ಕೆ

# ಆದಿಕವಿ ಶ್ರೀಮಹರ್ಷಿ ವಾಲ್ಮೀಕಿ ವಿಶ್ವವಿದ್ಯಾಲಯ ನಾಮಕರಣ

**ಯುವ ಮಾರ್ಗ ಸುದ್ದಿ**

**ರಾಯಚೂರು,ಜೂ.23–**ರಾಯಚೂರ ಗ್ರಾಮೀಣ ವಿಧಾನಸಭಾ ಕ್ಷೇತ್ರದಲ್ಲಿ ಅಂದಾಜು 936.00 ಕೋಟಿ ರೂ.ಗಳ ವೆಚ್ಚದಲ್ಲಿ ವಿವಿಧ ಕಾಮಗಾರಿಗಳ ಅಡಿಗಲ್ಲು ಹಾಗೂ ಉದ್ಘಾಟನೆ ನೆರವೇರಿಸಲು ರಾಯಚೂರಗೆ ಆಗಮಿಸಿದ್ದ ವೇಳೆ ರಾಜ್ಯ ದ ಮುಖ್ಯಮಂತ್ರಿಗಳಾದ ಸಿದ್ಧರಾಮ ಯ್ಯ ಅವರು ರಾಯಚೂರ ತಾಲೂಕಿನ ಯರಗೇರಾ ಗ್ರಾಮದ ಬಳಿಯಲ್ಲಿರುವ ವಿಶ್ವವಿದ್ಯಾಲಯಕ್ಕೆ ಆದಿಕವಿ ಶ್ರೀ ಮಹರ್ಷಿ ವಾಲ್ಮೀಕಿ ವಿಶ್ವವಿದ್ಯಾನಿಲಯದ ನಾಮಕರಣ ಮತ್ತು ಕಂಚಿನ ಪುತ್ಥಳಿಯನ್ನು ಲೋಕಾರ್ಪ ಣೆ ಮಾಡಿದರು. ಇದೆ ವೇಳೆ ಅವರು, ಆದಿಕವಿ ಶ್ರೀಮಹರ್ಷಿ ವಾಲ್ಮೀಕಿ ಉದ್ಯಾನ ವನ ಹಾಗೂ ಕಲ್ಯಾಣ ಕರ್ನಾಟಕ ಮಾನವ ಜಿನೋಮ್ ಅಧ್ಯಯನ ಸಂಸ್ಥೆಗೆ ಶಂಕು ಸ್ಥಾಪನೆ ನೆರವೇರಿಸಿದರು.



ಈ ವೇಳೆ ವಿರೋಧ ಪಕ್ಷದ ನಾಯಕರು ಹಾಗೂ ಸಂಸದರಾದ (ರಾಜ್ಯ ಸಭೆ) ಡಾ.ಮಲ್ಲಿಕಾರ್ಜುನ ಖರ್ಗೆ, ವೈದ್ಯಕೀಯ ಶಿಕ್ಷಣ ಹಾಗೂ ಕೌಶಲ್ಯಾಭಿವೃದ್ಧಿ ಉದ್ಯಮಶೀಲತೆ ಮತ್ತು ಜೀವನೋಪಾಯ ಸಚಿವರು ಹಾಗೂ ರಾಯಚೂರು ಜಿಲ್ಲಾ ಉಸ್ತುವಾರಿ ಸಚಿವರಾದ ಡಾ.ಶರಣಪ್ರಕಾಶ್ ರುದ್ರಪ್ಪ ಪಾಟೀಲ್, ಸಣ್ಣ ನೀರಾವರಿ, ವಿಜ್ಞಾನ ಮತ್ತು ತಂತ್ರಜ್ಞಾನ ಇಲಾಖೆ ಸಚಿವರಾದ 2ನೇಪುಟಕ್ಕೆ

# ಶಾಸಕ ರಾಜು ಕಾಗೆಗೆ ಕರೆದು ಮಾತನಾಡುವೆ:ಸಿಎಂ

**ಯುವ ಮಾರ್ಗ ಸುದ್ದಿ**

**ರಾಯಚೂರು,ಜೂ.23–**ಸರ್ಕಾರದ ಆಡಳಿತ ವೈಖರಿ ವಿರುದ್ಧ ಅಸಮಾಧಾನ ಹೊರಹಾಕಿ ರಾಜೀನಾಮೆ ನೀಡುವುದಾಗಿ ಹೇಳಿರುವ ಶಾಸಕ ರಾಜುಕಾಗೆ ಅವರನ್ನು ಕರೆದು ಮಾತನಾಡುತ್ತೇನೆ ಎಂದು ಮುಖ್ಯಮಂತ್ರಿ ಸಿದ್ದರಾಮಯ್ಯ ಹೇಳಿದರು. ರಾಯಚೂರಿನಲ್ಲಿಂದು ಶಾಸಕ ರಾಜುಕಾಗೆ ಅವರ

ಕ್ಷೇತ್ರದ ಅನುದಾನದ ವಿಚಾರವಾಗಿ ರಾಜುಕಾಗೆ ಅಸಮಾಧಾನಗೊಂಡು ಬಹಿರಂಗವಾಗಿ ಹೇಳಿಕೆ ನೀಡಿರುವ ಬೆನ್ನಲ್ಲೆ ಪ್ರತಿಕ್ರಿಯಿಸಿರುವ ಮುಖ್ಯಮಂತ್ರಿ ಸಿದ್ದರಾಮಯ್ಯ ಅವರನ್ನು ಕರೆದು ಮಾತನಾಡುತ್ತೇನೆ ಎಂದು ರಾಯಚೂರಿನಲ್ಲಿ ಹೇಳಿದರು.

ವಸತಿ ಇಲಾಖೆಯಲ್ಲಿ ಮನೆ




ಪಡೆಯಲು ಹಣ ನೀಡಬೇಕು ಎಂದು ಹೇಳಿಕೆ ನೀಡಿದ್ದ ಶಾಸಕ ಬಿ.ಆರ್ ಪಾಟೀಲ್ ಅವರನ್ನು ನಾಳೆ ತಮ್ಮನ್ನು ಭೇಟಿಯಾಗುವಂತೆ ತಿಳಿಸಿರುವ ಮುಖ್ಯಮಂತ್ರಿ ಸಿದ್ದರಾಮಯ್ಯ, ರಾಜುಕಾಗೆ ಅವರೊಂದಿಗೆ ಮಾತನಾಡುವುದಾಗಿ ಹೇಳಿ ಸಿಎಂ ಅನುದಾನ ಅಂತ ಇದೆಯಾ? ಅವರು ಹೇಳುತ್ತಾರಪ್ಪ ಅವರನ್ನು ಕರೆದು ಮಾತನಾಡುತ್ತೇನೆ ಎಂದರು.

ವಸತಿ ಸಚಿವರ ರಾಜೀನಾಮೆಗೆ ಶಾಸಕ ಬೇಳೂರು ಗೋಪಾಲಕೃಷ್ಣ ಆಗ್ರಹಿಸಿರುವ ಬಗ್ಗೆಯೂ ಪ್ರತಿಕ್ರಿಯಿಸಿದ ಅವರು, ಗೋಪಾಲಕೃಷ್ಣ ಬೇಳೂರು ಬಗ್ಗೆ ಮಾಹಿತಿ ಇಲ್ಲ.ಯಾವ ಸನ್ನಿವೇಶದಲ್ಲಿ ಹೇಳಿದ್ದಾರೋ ಗೊತ್ತಿಲ್ಲ ಎಂದರು.

ಅಕ್ರಮ ಗಣಿಗಾರಿಕೆ ಬಗ್ಗೆ ಸಚಿವ ಎಚ್.ಕೆ ಪಾಟೀಲ್ ಪತ್ರ ಬರೆದಿರುವ ಬಗ್ಗೆಯೂ ಪ್ರತಿಕ್ರಿಯೆ ನೀಡಿದ ಅವರು, ಅಕ್ರಮ ಗಣಿಗಾರಿಕೆ ನಮ್ಮ ಕಾಲದಲ್ಲಿ ನಡೆದಿಲ್ಲ, ವಿಶೇಷ ನ್ಯಾಯಾಲಯ ಮಾಡಿ ತ್ವರಿತ ಗತಿಯಲ್ಲಿ ಇತ್ಯರ್ಥ ಮಾಡಿ ಎಂದು ಹೇಳಿದ್ದಾರೆ ಎಂದರು. ದೆಹಲಿಗೆ ಹೋಗುತ್ತಿದ್ದೇನೆ ನಾಳೆ ರಾಷ್ಟ್ರಪತಿಗಳನ್ನು ಭೇಟಿ ಮಾಡುವೆ ಎಂದರು.

# ಕೈ ಪಾಳಯದಲ್ಲಿ ಭುಗಿಲೆದ್ದ ಅಸಮಾಧಾನದ ಭುಗಿಲು

**ಬೆಂಗಳೂರು, ಜೂ. 23–**ರಾಜ್ಯದ ಕಾಂಗ್ರೆಸ್ ಸರ್ಕಾರದ ಕಾರ್ಯವೈಖರಿ ಬಗ್ಗೆ ಕಾಂಗ್ರೆಸ್‌ನ ಶಾಸಕರೇ ಅಸಮಾಧಾನ ಹೊರ ಹಾಕುತ್ತಿದ್ದು, ಆಡಳಿತ ಪಕ್ಷದಲ್ಲೇ ಒಬ್ಬರಾದ ಮೇಲೆ ಒಬ್ಬ ಶಾಸಕರು ಸರ್ಕಾರದ ವಿರುದ್ಧ ಹೇಳಿಕೆ ನೀಡುತ್ತಿದ್ದು, ಸರ್ಕಾರಕ್ಕೆ ತೀವ್ರ ಮುಜುಗರ ತಂದಿಡುತ್ತಿದ್ದಾರೆ. ಜತೆಗೆ ಸರ್ಕಾರ ಮಟ್ಟದಲ್ಲಿ ಎಲ್ಲವೂ ಸರಿ ಇಲ್ಲ. ಕೈನಲ್ಲಿ ಅಸಮಾಧಾನ ಹೊಗೆಯಾಡುತ್ತಿದೆ ಎಂಬುದನ್ನು ಪುಷ್ಟೀಕರಿಸಿದೆ.



ಶಾಸಕ ಬಿ.ಆರ್. ಪಾಟೀಲ್ ಅವರು ವಸತಿ ಹಂಚಿಕೆಗೆ ಹಣ ಕೊಡಬೇಕು ಎಂಬ ಆರೋಪ ಮಾಡಿದ ಬೆನ್ನಲ್ಲೆ ಕಾಂಗ್ರೆಸ್‌ನ ಕಾಗವಾಡ ಶಾಸಕ ಪರಮಗೌಡ ಹಲಗೌಡ ಕಾಗೆ (ರಾಜು ಕಾಗೆ) ಸಹ ಬಹಿರಂಗವಾಗಿಯೇ ಸರ್ಕಾರದ ವಿರುದ್ಧ ಟೀಕೆ ಮಾಡಿದ್ದಾರೆ.

ಶಾಸಕ ಬಿ.ಆರ್. ಪಾಟೀಲ್ ಅವರ ಹೇಳಿಕೆ ರಾಜ್ಯ ರಾಜಕೀಯದಲ್ಲಿ ದೊಡ್ಡ ಸದ್ದು ಮಾಡಿ ಕಾಂಗ್ರೆಸ್ ಸರ್ಕಾರದ ವಿರುದ್ಧ ವಿಪಕ್ಷಗಳಿಗೆ ಅಸ್ತ್ರ ಒದಗಿಸಿರುವಾಗಲೇ ಶಾಸಕ ರಾಜು ಕಾಗೆ ಸಹ ರಾಜ್ಯ ಸರ್ಕಾರದ ಆಡಳಿತ ವೈಖರಿ ವಿರುದ್ಧ ಅಸಮಾಧಾನ ಹೊರ ಹಾಕಿ, ತಾನು ಶಾಸಕ ಸ್ಥಾನಕ್ಕೆ ರಾಜೀನಾಮೆ ನೀಡಿದರೂ ಅಚ್ಚರಿ ಇಲ್ಲ ಎಂಬ ಹೇಳಿಕೆ ನೀಡಿರುವುದು ಬಾರಿ ಸಂಚಲನಕ್ಕೆ ಕಾರಣವಾಗಿದೆ.

ಕಾಗವಾಡದ ಹೈನಾಪುರ ಪಟ್ಟಣದಲ್ಲಿಂದು ಸುದ್ದಿಗಾರರೊಂದಿಗೆ ಮಾತನಾಡಿದ ಕಾಂಗ್ರೆಸ್ ಶಾಸಕ ರಾಜು ಕಾಗೆ ಅವರು, ಎರಡು ವರ್ಷಗಳ ಹಿಂದೆ ತಮ್ಮ ಕ್ಷೇತ್ರಕ್ಕೆ ಮುಖ್ಯಮಂತ್ರಿಗಳ ವಿಶೇಷ ಅನುದಾನದಡಿ 25 ಕೋಟಿ ರೂ.ಗಳನ್ನು ಮಂಜೂರು ಮಾಡಲಾಗಿತ್ತು. ಇದುವರೆಗೂ ಕಾರ್ಯಾದೇಶ ನೀಡಿಲ್ಲ. ಇದು ಸರ್ಕಾರದ ಆಡಳಿತ ವೈಖರಿ ಎಂದು ಹರಿಹಾಯ್ದಿದ್ದಾರೆ.

ಸರ್ಕಾರದ ಆಡಳಿತ ವೈಖರಿಯನ್ನು ನೋಡಿದರೆ ನಾನು ಇನ್ನೆರಡು ದಿನಗಳಲ್ಲಿ ರಾಜೀನಾಮೆ ನೀಡಿದರೂ ಅಚ್ಚರಿ ಇಲ್ಲ ಎಂದು ಅವರು ತಿಳಿಸಿದ್ದಾರೆ.

ಶಾಸಕ ಬಿ.ಆರ್. ಪಾಟೀಲ್ ಹೇಳಿರುವುದು ಸುಳ್ಳಲ್ಲ ನಿಜಾನೇ ಇದೆ. ನನ್ನ ಪರಿಸ್ಥಿತಿಯೂ ಭಿನ್ನವಾಗಿಲ್ಲ. ಬಿ.ಆರ್. ಪಾಟೀಲ್‌ಗಿಂತ ನನ್ನ ಪರಿಸ್ಥಿತಿ ಅದರ ಅಪ್ಪನದ್ದಾಗಿದೆ. ಬಿ.ಆರ್. ಪಾಟೀಲ್ ಹೇಳಿದ್ದಕ್ಕೆ ನನ್ನ ಸಹಮತ ಇದೆ ಎಂದು ರಾಜು ಕಾಗೆ ಅವರು ಸರ್ಕಾರದ ವಿರುದ್ಧವೇ ಅಸಮಾಧಾನ ಹೊರ ಹಾಕಿದ್ದಾರೆ.

ನಮ್ಮ ಸರ್ಕಾರದಲ್ಲಿ ಯಾವುದೇ ಅಧಿಕಾರಿಗಳು ಸರಿಯಾಗಿ ಕೆಲಸ ಮಾಡುತ್ತಿಲ್ಲ. ಆಡಳಿತ ವ್ಯವಸ್ಥೆ ಸಂಪೂರ್ಣ ಹಾಳಾಗಿದೆ ಎಂದು ಕಿಡಿಕಾರಿದ್ದಾರೆ.

ಕ್ಷೇತ್ರದಲ್ಲಿ ಕೆಲಸಗಳಾಗುತ್ತಿಲ್ಲ. ಮುಖ್ಯಮಂತ್ರಿಗಳ ವಿಶೇಷ ಅನುದಾನದಡಿ 25 ಕೋಟಿ ರೂ.ಗಳು ಮಂಜೂರಾಗಿತ್ತು. ಅದರಲ್ಲಿ 12 ಕೋಟಿ ರೂ.ಗಳನ್ನು ರಸ್ತೆ ಅಭಿವೃದ್ಧಿಗೆ, ಉಳಿದ 13 ಕೋಟಿ ರೂ.ಗಳನನು 72 ಸಮುದಾಯಗಳ ಭವನ ನಿರ್ಮಾಣಕ್ಕೆ ಬಳಸಲು ಉದ್ದೇಶಿಸಿದ್ದೆ ಆದರೆ ಇದುವರೆಗೂ ಕಾರ್ಯಾದೇಶ ನೀಡಿಲ್ಲ. ಯಾವ ಕಾರಣಕ್ಕೆ ಕಾರ್ಯಾದೇಶ ನೀಡಿಲ್ಲವೋ ನನಗೆ ಗೊತ್ತಿಲ್ಲ ಎಂದು ಅವರು ಅಸಮಾಧಾನ ವ್ಯಕ್ತಪಡಿಸಿ, ಅನುದಾನ ಸಿಗದೆ ಅಭಿವೃದ್ಧಿ ಕಾರ್ಯಗಳಾಗದೆ ಇರುವುದು ನನ್ನ ಮನಸ್ಸಿಗೆ ತುಂಬಾ ನೋವಾಗಿದೆ. 2ನೇಪುಟಕ್ಕೆ

# ಪೋಷಕತ್ವ ಯೋಜನೆ ಕಾರ್ಯಕ್ರಮ: ಅನಾಥ ಮಕ್ಕಳಿಗೆ ತಾತ್ಕಾಲಿಕ ಆರೈಕೆ ಕುರಿತು ಜಾಗೃತಿ



**ಯುವ ಮಾರ್ಗ ಸುದ್ದಿ**

**ದೇವದುರ್ಗ,ಜೂ.23–** ರಾಯಚೂರು ಜಿಲ್ಲೆಯ ದೇವದುರ್ಗ ತಾಲೂಕು ಆರೋಗ್ಯ ಕೇಂದ್ರದಲ್ಲಿ ಇಂದು ಪೋಷಕತ್ವ ಯೋಜನೆ ಕಾರ್ಯಕ್ರಮವನ್ನು ಆಯೋಜಿಸಲಾಗಿತ್ತು. ಈ ಕಾರ್ಯಕ್ರಮದಲ್ಲಿ ಆರೋಗ್ಯ ಸಿಬ್ಬಂದಿಗಳು ಹಾಗೂ ಆಶಾ ಕಾರ್ಯಕರ್ತೆಯರಿಗೆ ಪೋಷಕತ್ವ ಯೋಜನೆಯ ಮಹತ್ವದ ಕುರಿತು ವಿವರಿಸಲಾಯಿತು.

ಕಾರ್ಯಕ್ರಮದಲ್ಲಿ ಮುಖ್ಯ ಭಾಷಣಕಾರರಾಗಿ ಭಾಗವಹಿಸಿದ್ದ ಜಿಲ್ಲಾ ಸಂಯೋಜಕರಾದ ನಾಗರಾಜ ಮಾನಸಗಲ್ ಅವರು, ಪೋಷಕತ್ವ ಎಂದರೆ ಕಾನೂನಿನ ಪ್ರಕಾರ ಪಾಲನೆ, ಪೋಷಣೆ, ರಕ್ಷಣೆಯಿಂದ ವಂಚಿತರಾದ ಮಕ್ಕಳು ಹಾಗೂ ಪರಿವಾರದ ಹಾರೈಕೆಯಿಂದ ವಂಚಿತರಾದ ಮಕ್ಕಳಿಗೆ ತಾತ್ಕಾಲಿಕ ಪರಿವಾರದ ಮೂಲಕ ಸಿಗುವ ಕಾಳಜಿ ಎಂದು ತಿಳಿಸಿದರು.

ಅವರು ಬಾಲ ನ್ಯಾಯ ಕಾಯ್ದೆ 2015, ಕಲಂ 44ರ 2ನೇ ಪುಟಕ್ಕೆ

## ಮೊದಲನೇಯ ಪುಟದಿಂದ

# ಜನತೆಗೆ ನೀಡಿದ ವಚನದಂತೆ ನಡೆದ ಸರ್ಕಾರ ನಮ್ಮದು: ಸಿಎಂ ಸಿದ್ಧರಾಮಯ್ಯ

ಪಡೆಯುವಂತಾಗಿದೆ.

ಇದರ ಸ್ಮರಣಾರ್ಥ ದಶಮಾನೋತ್ಸವ ಸಂಚಿಕೆ ಪ್ರಕಟಿಸಿ ಬಿಡುಗಡೆ ಮಾಡಿದ್ದೇವೆ. ರಾಯಚೂರ ಗ್ರಾಮೀಣ ಪ್ರದೇಶಕ್ಕೆ ಸೂಕ್ತ ನ್ಯಾಯಸಿಗುವ ನಿಟ್ಟಿನಲ್ಲಿ ಈ ಪ್ರದೇಶವನ್ನು ತಾಲೂಕು ಕೇಂದ್ರ ಎಂದು ಘೋಷಿಸಬೇಕು. ದೇವಸಗೂರನ್ನು ನಗರಸಭೆಯಾಗಿ ಮೇಲ್ದರ್ಜೆಗರಿಸಬೇಕು ಎಂದು ಶಾಸಕರು ಇದೆ ವೇಳೆ ಮುಖ್ಯಮಂತ್ರಿಗಳಲ್ಲಿ ಮನವಿ ಮಾಡಿದರು.ಫಲಾನುಭವಿಗಳಿಗೆ ಹಕ್ಕುಪತ್ರ ವಿತರಣೆ: ಕಾರ್ಯಕ್ರಮದಲ್ಲಿ ವಿವಿಧ ಯೋಜನೆಗಳಡಿ ಫಲಾನುಭವಿಗಳಿಗೆ ಮುಖ್ಯಮಂತ್ರಿಗಳು ಹಾಗೂ ಸಚಿವರು, ಶಾಸಕರು ಸಾಂಕೇತಿಕವಾಗಿ ಸೌಲಭ್ಯ ವಿತರಿಸಿದರು. ಭೂ ಒಡೆತನ ಯೋಜನೆಯ ಹಕ್ಕುಪತ್ರ, ಪ್ರೇರಣಾ ಯೋಜನೆಯ ಯೋಜನಾ ಮಂಜೂರಾತಿ ಆದೇಶ ಪತ್ರ ಸೇರಿದಂತೆ ನಾನಾ ಸೌಕರ್ಯಗಳ ಮಂಜೂರಾತಿ ಆದೇಶ ಪತ್ರಗಳನ್ನು ವಿತರಿಸಲಾಯಿತು.ಸಮಾರಂಭದಲ್ಲಿ ವಿರೋಧ ಪಕ್ಷದ ನಾಯಕರು ಹಾಗೂ ಸಂಸದರಾದ (ರಾಜ್ಯ ಸಭೆ) ಡಾ.ಮಲ್ಲಿಕಾರ್ಜುನ ಖರ್ಗೆ, ಕಾನೂನು, ನ್ಯಾಯ, ಮಾನವ ಹಕ್ಕುಗಳ, ಸಂಸದೀಯ ವ್ಯವಹಾರಗಳು, ಶಾಸನ ರಚನೆ ಹಾಗೂ ಪ್ರವಾಸೋದ್ಯಮ ಇಲಾಖೆಯ ಸಚಿವರಾದ ಡಾ.ಹೆಚ್.ಕೆ.ಪಾಟೀಲ, ಸಮಾಜ ಕಲ್ಯಾಣ ಇಲಾಖೆ ಸಚಿವರಾದ ಡಾ.ಹೆಚ್.ಸಿ.ಮಹದೇವಪ್ಪ, ಸಣ್ಣ ನೀರಾವರಿ, ವಿಜ್ಞಾನ ಮತ್ತು ತಂತ್ರಜ್ಞಾನ ಇಲಾಖೆ ಸಚಿವರಾದ ಎನ್.ಎಸ್. ಭೋಸರಾಜು, ಉನ್ನತ ಶಿಕ್ಷಣ ಇಲಾಖೆ ಸಚಿವರಾದ ಡಾ.ಎಂ.ಸಿ. ಸುಧಾಕರ್, ಲೋಕೋಪಯೋಗಿ ಇಲಾಖೆ ಸಚಿವರಾದ ಸತೀಶ್ ಜಾರಕಿಹೊಳಿ, ಇಂಧನ ಸಚಿವರಾದ ಕೆ.ಜೆ.ಜಾರ್ಜ್, ಸಣ್ಣ ಕೈಗಾರಿಕೆ ಮತ್ತು ಸಾರ್ವಜನಿಕ ಉದ್ದಿಮೆಗಳ ಇಲಾಖೆ ಸಚಿವರಾದ ಶರಣಬಸಪ್ಪ ದರ್ಶನಾಪೂರು, ಹಿಂದುಳಿದ ವರ್ಗಗಳ ಕಲ್ಯಾಣ ಇಲಾಖೆ, ಕನ್ನಡ ಮತ್ತು ಸಂಸ್ಕೃತಿ ಇಲಾಖೆ ಸಚಿವರಾದ ಶಿವರಾಜ ತಂಗಡಗಿ, ಕರ್ನಾಟಕ ರಾಜ್ಯ ಖಾದಿ ಮತ್ತು ಗ್ರಾಮೋದ್ಯೋಗ ಮಂಡಳಿ ಅಧ್ಯಕ್ಷರು ಆಗಿರುವ ಮಸ್ಕಿ ಕ್ಷೇತ್ರದ ಶಾಸಕರಾದ ಆರ್.ಬಸನಗೌಡ ತುರವಿಹಾಳ, ಕರ್ನಾಟಕ ರಾಜ್ಯ ಕೈಗಾರಿಕಾ ಮೂಲಸೌಲಭ್ಯ ಅಭಿವೃದ್ಧಿ ನಿಗಮದ ಅಧ್ಯಕ್ಷರು ಆಗಿರುವ ಸಿಂಧನೂರು ಕ್ಷೇತ್ರದ ಶಾಸಕರಾದ ಹಂಪನಗೌಡ ಬಾದರ್ಲಿ, ಕಲ್ಯಾಣ ಕರ್ನಾಟಕ ಪ್ರದೇಶ ಅಭಿವೃದ್ಧಿ ಮಂಡಳಿಯ ಅಧ್ಯಕ್ಷರಾದ ಡಾ.ಅಜಯ್ ಧರ್ಮಸಿಂಗ್, ಪಂಚ ಗ್ಯಾರಂಟಿ ಯೋಜನೆಗಳ ಅನುಷ್ಠಾನ ಪ್ರಾಧಿಕಾರದ ಕಲಬುರಗಿ ವಿಭಾಗದ ಉಪಾಧ್ಯಕ್ಷರಾದ ಎಸ್.ಆರ್.ಮೆಹರೋಜ್‌ಖಾನ್, ರಾಯಚೂರು ಲೋಕಸಭಾ ಸದಸ್ಯರಾದ ಜಿ.ಕುಮಾರ ನಾಯಕ, ಮಾನವಿ ಕ್ಷೇತ್ರದ ಶಾಸಕರಾದ ಜಿ.ಹಂಪಯ್ಯ ನಾಯಕ, ಯಾದಗಿರಿ ಶಾಸಕರಾದ ಚೆನ್ನಾರೆಡ್ಡಿ ಪಾಟೀಲ ತನ್ನೂರ, ವಿಧಾನ ಪರಿಷತ್ ಶಾಸಕರಾದ ಡಾ.ಚಂದ್ರಶೇಖರ ಪಾಟೀಲ್, ಶರಣಗೌಡ ಅ. ಪಾಟೀಲ್ ಬಯ್ಯಾಪೂರ, ಮುಖಂಡರಾದ ಅಮರೇಗೌಡ ಪಾಟೀಲ ಬಯ್ಯಾಪುರ, ತುಂಗಭದ್ರಾ ಯೋಜನೆಯ ಅಚ್ಚುಕಟ್ಟು ಪ್ರದೇಶಾಭಿವೃದ್ಧಿ ಪ್ರಾಧಿಕಾರದ ಅಧ್ಯಕ್ಷರಾದ ಹಸನಸಾಬ್ ನಬಿಸಾಬ್ ದೋಟಿಹಾಳ, ಕೃಷಿ ಉತ್ಪನ್ನ ಮಾರುಕಟ್ಟೆ ಸಮಿತಿಯ ಅಧ್ಯಕ್ಷರಾದ ಮಲ್ಲಿಕಾರ್ಜುನ ಗೌಡ, ರಾಯಚೂರು ನಗರಾಭಿವೃದ್ಧಿ ಪ್ರಾಧಿಕಾರದ ಅಧ್ಯಕ್ಷರಾದ ರಾಜಶೇಖರ ರಾಮಸ್ವಾಮಿ, ಜಿಲ್ಲಾ ಮಟ್ಟದ ಗ್ಯಾರಂಟಿ ಯೋಜನೆಗಳ ಅನುಷ್ಠಾನ ಸಮಿತಿಯ ಅಧ್ಯಕ್ಷರಾದ ಪಾಮಯ್ಯ ಮುರಾರಿ, ರಾಯಚೂರು ತಾಲ್ಲೂಕ ಮಟ್ಟದ ಗ್ಯಾರಂಟಿ ಯೋಜನೆಗಳ ಅನುಷ್ಠಾನ ಸಮಿತಿಯ ಅಧ್ಯಕ್ಷರಾದ ಪವನ್ ಕಿಶೋರ್ ಪಾಟೀಲ್, ಯರಗೇರಾ ಗ್ರಾಮ ಪಂಚಾಯತ್ ಅಧ್ಯಕ್ಷರಾದ ಶ್ರೀಮತಿ ಮಹಾದೇವಿ ಗಂ. ಭೀಮೇಶ ನಾಯಕ್, ಆರ್ಥಿಕ ಇಲಾಖೆ, ಉನ್ನತ ಶಿಕ್ಷಣ ಇಲಾಖೆ, ಪರಿಶಿಷ್ಟ ಪಂಗಡಗಳ ಕಲ್ಯಾಣ ಇಲಾಖೆ, ಕರ್ನಾಟಕ ಮಹರ್ಷಿ ವಾಲ್ಮೀಕಿ ಪರಿಶಿಷ್ಟ ಪಂಗಡಗಳ ಅಭಿವೃದ್ಧಿ ನಿಗಮ ಸೇರಿದಂತೆ ವಿವಿಧ ಇಲಾಖೆಯ ಉನ್ನತ ಅಧಿಕಾರಿಗಳು, ರಾಯಚೂರು ಜಿಲ್ಲೆಯ ಜಿಲ್ಲಾಧಿಕಾರಿಗಳಾದ ನಿತೀಶ್ ಕೆ., ರಾಯಚೂರು ಜಿಲ್ಲಾ ಪಂಚಾಯತ್ ಮುಖ್ಯಕಾರ್ಯನಿರ್ವಾಹಕ ಅಧಿಕಾರಿಗಳಾದ ರಾಹುಲ್ ತುಕಾರಾಂ ಪಾಂಡ್ವೆ, ರಾಯಚೂರು ಜಿಲ್ಲಾ ಪೊಲೀಸ್ ವರಿಷ್ಠಾಧಿಕಾರಿಗಳಾದ ಎಂ.ಪುಟ್ಟಮಾದಯ್ಯ. ಯಾದಗಿರಿ ಜಿಲ್ಲಾ ಪೊಲೀಸ್ ವರಿಷ್ಠಾಧಿಕಾರಿಗಳಾದ ಪೃಥ್ವಿಕ್ ಶಂಕರ್, ಅಪರ ಜಿಲ್ಲಾಧಿಕಾರಿಗಳಾದ ಶಿವಾನಂದ, ಲಿಂಗಸೂರ ಸಹಾಯಕ ಆಯುಕ್ತರಾದ ಬಸವಣ್ಣೆಪ್ಪ ಕಲಶೆಟ್ಟಿ, ತಹಸೀಲ್ದಾರ ಸುರೇಶ ವರ್ಮಾ, ಮುಖಂಡರಾದ ಬಸವರಾಜ ಪಾಟೀಲ ಇಟಗಿ, ಜಯಂತರಾವ್ ಪತಂಗೆ, ಮಲ್ಲಿಕಾರ್ಜುನಗೌಡ ತಲಮಾರಿ, ನಾಗೇಂದ್ರಪ್ಪ ಮಟಮಾರಿ, ರಜಾಕ್ ಉಸ್ತಾದ್, ಅಸ್ಲಂ ಪಾಶಾ, ಚನ್ನಬಸು ನಾಯಕ ಸೇರಿದಂತೆ ಇತರರು ಇದ್ದರು.

ವಿಧಾನ ಪರಿಷತ್ ಶಾಸಕರಾದ ಎ. ವಸಂತಕುಮಾರ ಅವರು ಸ್ವಾಗತಿಸಿದರು. ರಾಯಚೂರ ಸಹಾಯಕ ಆಯುಕ್ತರಾದ ಗಜಾನನ ಬಾಳೆ ಅವರು ವಂದಿಸಿದರು.

# ಕೈ ಪಾಳಯದಲ್ಲಿ ಭುಗಿಲೆದ್ದ ಅಸಮಾಧಾನದ ಭುಗಿಲು

ರಾಜೀನಾಮೆ ನೀಡುವ ಮನಸ್ಥಿತಿಯಲ್ಲಿದ್ದೇನೆ. 2–3 ದಿನಗಳಲ್ಲಿ ಮುಖ್ಯಮಂತ್ರಿಗಳನ್ನು ಭೇಟಿ ಮಾಡುತ್ತನೆ. ರಾಜೀನಾಮೆ ಕೊಟ್ಟರೂ ಅಚ್ಚರಿ ಇಲ್ಲ ಎಂದು ರಾಜೂ ಕಾಗೆ ಹೇಳಿದ್ದಾರೆ.

ವಸತಿ ಇಲಾಖೆಯಿಂದ ಮನೆಗಳನ್ನು ಪಡೆಯಲು ಲಂಚ ನೀಡಬೇಕು ಎಂಬ ಶಾಸಕ ಬಿ. ಆರ್. ಪಾಟೀಲ್ ಹೇಳಿಕೆ ರಾಜ್ಯ ರಾಜಕೀಯದಲ್ಲಿ ದೊಡ್ಡ ಸದ್ದು ಮಾಡುತ್ತಿದ್ದು, ಆಡಳಿತ ಪಕ್ಷದ ಶಾಸಕರೇ ಸರ್ಕಾರದ ವಿರುದ್ಧ ತಿರುಗಿ ಬಿದ್ದಿದ್ದು, ಬಿ.ಆರ್. ಪಾಟೀಲ್ ರವರ ಆರೋಪಕ್ಕೆ ಸಂಬಂಧಿಸಿದಂತೆ ಸಚಿವ ಜಮೀರ್ ಅಹಮದ್ ಖಾನ್ ರಾಜೀನಾಮೆ ನೀಡಬೇಕು ಎಂದು ಸಾಗರ ಕ್ಷೇತ್ರದ ಕಾಂಗ್ರೆಸ್ ಶಾಸಕ ಬೇಳೂರು ಗೋಪಾಲಕೃಷ್ಣ ಒತ್ತಾಯಿಸಿದರು.

ಶಿವಮೊಗ್ಗದಲ್ಲಿಂದು ಸುದ್ದಿಗಾರರೊಂದಿಗೆ ಮಾತನಾಡಿದ ಅವರು, ಸಚಿವ ಜಮೀರ್ ಅಹಮದ್ ಖಾನ್ ವಿರುದ್ಧ ಆರೋಪಗಳು ಕೇಳಿ ಬಂದಿವೆ. ಹಾಗಾಗಿ ಅವರು ತಮ್ಮ ಸ್ಥಾನಕ್ಕೆ ರಾಜೀನಾಮೆ ನೀಡಿ ತನಿಖೆ ಎದುರಿಸಿ ತನಿಖೆಯಲ್ಲಿ ನಿರ್ದೋಷಿ ಎಂದು ಸಾಬೀತಾದ ಬಳಿಕ ಸಂಪುಟಕ್ಕೆ ಮರು ಸೇರ್ಪಡೆ ಆಗಲಿ ಎಂದು ಹೇಳಿದರು.ಈ ಹಿಂದೆ ಸಹ ಆರೋಪಗಳು ಕೇಳಿ ಬಂದಾಗ ಸಚಿವರುಗಳು ರಾಜೀನಾಮೆ ನೀಡಿ ತನಿಖೆ ಎದುರಿಸಿದ ಉದಾಹರಣೆಗಳು ಇವೆ. ಅದೇ ರೀತಿ ಸಚಿವ ಜಮೀಕ್ ಅಹಮದ್ ಖಾನ್ ಸಹ ರಾಜೀನಾಮೆ ಕೊಟ್ಟು ತನಿಖೆ ಎದುರಿಸಿ ನಿರ್ದೋಷಿ ಎಂದು ಸಾಬೀತಾದ ಬಳಿಕ ಸಂಪುಟಕ್ಕೆ ಸೇರ್ಪಡೆಯಾಗಲಿ ಎಂದು ಗೋಪಾಲಕೃಷ್ಣ ಬೇಳೂರು ಹೇಳಿದರು.

ಶಾಸಕ ರಾಜು ಕಾಗೆ ಕ್ಷೇತ್ರದ ಕೆಲಸಗಳಾಗದೆ ಇರುವುದರಿಂದ ರಾಜೀನಾಮೆ ನೀಡಲು ಮುಂದಾಗಿರುವ ಬಗ್ಗೆ ಪ್ರತಿಕ್ರಿಯಿಸಿರುವ ಬಿಜೆಪಿಯ ರಾಜ್ಯಸಭಾ ಸದಸ್ಯ ಈರಣ್ಣ ಕಡಾಡಿ ಅವರು, ನೀವು ರಾಜೀನಾಮೆ ಕೊಡುವುದರಿಂದ ಸಮಸ್ಯ ಬಗೆಹರಿಯುವುದಿಲ್ಲ. ನಿಮ್ಮ ಮುಖ್ಯಮಂತ್ರಿಗಳಿಂದ ರಾಜೀನಾಮೆ ಕೊಡಿಸಿ, ಜನರ ಬಳಿಗೆ ಹೋಗೋಣ ಏನು ತೀರ್ಮಾನ ಆಗುತ್ತೋ ನೋಡೋಣ ಎಂಬ ಹೇಳಿಕೆ ನೀಡುವ ಮೂಲಕ ಬಿಜೆಪಿಗೆ ಯಾರೂ ಬಂದರೂ ಸ್ವಾಗತ ಮಾಡುತ್ತೇವೆ ಎಂದಿದ್ದಾರೆ.

# ಮಕ್ಕಳಿಗೆ ತಾತ್ಕಾಲಿಕ ಆರೈಕೆ ಕುರಿತು ಜಾಗೃತಿ

ಪ್ರಕಾರ ಪೋಷಕತ್ವ ಯೋಜನೆಯ ಉದ್ದೇಶವನ್ನು ವಿವರಿಸಿದರು. ಈ ಯೋಜನೆಯಡಿ ಮಗುವಿನ ಪಾಲನೆ, ಪೋಷಣೆ, ರಕ್ಷಣೆಗಾಗಿ ಜಿಲ್ಲಾ ಮಕ್ಕಳ ರಕ್ಷಣಾ ಘಟಕ ಹಾಗೂ ಜಿಲ್ಲಾ ಮಕ್ಕಳ ಕಲ್ಯಾಣ ಸಮಿತಿಯ ಆದೇಶದ ಮೇರೆಗೆ ಜೈವಿಕ ಕುಟುಂಬವಲ್ಲದ ಬೇರೊಂದು ಕುಟುಂಬಕ್ಕೆ ತಾತ್ಕಾಲಿಕ ಅಥವಾ ವಿಸ್ತರಿಸಲ್ಪಟ್ಟ ಅವಧಿಯವರೆಗೆ, ಅಂದರೆ ಎರಡು ವರ್ಷಕ್ಕೆ ಮೀರದ ಅವಧಿಯವರೆಗೆ ಮಗುವನ್ನು ಕಲ್ಪಿಸಿಕೊಡುವ ಉದ್ದೇಶ ಇದಾಗಿದೆ ಎಂದು ತಿಳಿಸಿದರು. ಇದಲ್ಲದೆ, ಸರ್ಕಾರದ ವಿವಿಧ ಯೋಜನೆಗಳ ಕುರಿತು ಸಹ ಅವರು ಮಾಹಿತಿ ನೀಡಿದರು.

ಕಾರ್ಯಕ್ರಮದಲ್ಲಿ ತಾಲೂಕು ಆರೋಗ್ಯ ಅಧಿಕಾರಿಗಳಾದ ಡಾ. ಸುನಿಲ್ ಸರೋದೆ, ಬಿಎಚ್‌ಒ ಶ್ರೀದೇವಿ, ಸಿಎಚ್‌ಒಗಳಾದ ನಿರ್ಮಲಾ ಮತ್ತು ಸಿದ್ದಮ್ಮ ಹಾಗೂ ಆಶಾ ಕಾರ್ಯಕರ್ತೆಯರು ಉಪಸ್ಥಿತರಿದ್ದರು.

# ಆದಿಕವಿ ಶ್ರೀಮಹರ್ಷಿ ವಾಲ್ಮೀಕಿ ವಿಶ್ವವಿದ್ಯಾಲಯ ನಾಮಕರಣ

ಎನ್.ಎಸ್.ಭೋಸರಾಜು ಸೇರಿದಂತೆ ವಿವಿಧ ಸಚಿವರು, ಕರ್ನಾಟಕ ಮಹರ್ಷಿ ವಾಲ್ಮೀಕಿ ಪರಿಶಿಷ್ಟ ಪಂಗಡಗಳ ಅಭಿವೃದ್ಧಿ ನಿಗಮದ ಅಧ್ಯಕ್ಷರು ಆಗಿರುವ ರಾಯಚೂರು ಗ್ರಾಮಾಂತರ ಕ್ಷೇತ್ರದ ಶಾಸಕರಾದ ಬಸನಗೌಡ ದದ್ದಲ್, ಕರ್ನಾಟಕ ರಾಜ್ಯ ಖಾದಿ ಮತ್ತು ಗ್ರಾಮೋದ್ಯೋಗ ಮಂಡಳಿ ಅಧ್ಯಕ್ಷರು ಆಗಿರುವ ಮಸ್ಕಿ ಕ್ಷೇತ್ರದ ಶಾಸಕರಾದ ಆರ್.ಬಸನಗೌಡ ತುರವಿಹಾಳ, ಕರ್ನಾಟಕ ರಾಜ್ಯ ಕೈಗಾರಿಕಾ ಮೂಲಸೌಲಭ್ಯ ಅಭಿವೃದ್ಧಿ ನಿಗಮದ ಅಧ್ಯಕ್ಷರು ಆಗಿರುವ ಸಿಂಧನೂರು ಕ್ಷೇತ್ರದ ಶಾಸಕರಾದ ಹಂಪನಗೌಡ ಬಾದರ್ಲಿ, ರಾಯಚೂರು ಲೋಕಸಭಾ ಸದಸ್ಯರಾದ ಜಿ.ಕುಮಾರ ನಾಯಕ, ಮಾನವಿ ಕ್ಷೇತ್ರದ ಶಾಸಕರಾದ ಜಿ.ಹಂಪಯ್ಯ ನಾಯಕ, ದೇವದುರ್ಗ ಕ್ಷೇತ್ರದ ಶಾಸಕರಾದ ಕರೆಮ್ಮ ಜಿ ನಾಯಕ ಸೇರಿದಂತೆ ಇನ್ನಿತರ ಶಾಸಕರು, ವಿಧಾನ ಪರಿಷತ್ ಸದಸ್ಯರು, ರಾಯಚೂರು ಜಿಲ್ಲೆಯ ಜಿಲ್ಲಾಧಿಕಾರಿಗಳಾದ ನಿತೀಶ್ ಕೆ., ರಾಯಚೂರು ಜಿಲ್ಲಾ ಪಂಚಾಯತ್ ಮುಖ್ಯಕಾರ್ಯನಿರ್ವಾಹಕ ಅಧಿಕಾರಿಗಳಾದ ರಾಹುಲ್ ತುಕಾರಾಂ ಪಾಂಡ್ವೆ, ರಾಯಚೂರು ಜಿಲ್ಲಾ ಪೊಲೀಸ್ ವರಿಷ್ಠಾಧಿಕಾರಿಗಳಾದ ಎಂ.ಪುಟ್ಟಮಾದಯ್ಯ, ಆದಿಕವಿ ಶ್ರೀ ಮಹರ್ಷಿ ವಾಲ್ಮೀಕಿ ವಿಶ್ವವಿದ್ಯಾನಿಲಯದ ಕುಲಪತಿ ಡಾ.ಸುಯಯೀಂದ್ರ ಕುಲಕರ್ಣಿ, ಕುಲಸಚಿವರಾದ ಡಾ.ಚನ್ನಪ್ಪ ಎ., ಸಿಂಡಿಕೇಟ್ ಮತ್ತು ವಿದ್ಯಾವಿಷಯಕ ಪರಿಷತ್ತಿನ ಸದಸ್ಯರು ಸೇರಿದಂತೆ ವಿಶ್ವವಿದ್ಯಾಲಯದ ವಿವಿಧ ವಿಭಾಗಗಳ ಮುಖ್ಯಸ್ಥರು, ಪ್ರಾಧ್ಯಾಪಕರು, ಸಹ ಪ್ರಾಧ್ಯಾಪಕರು, ಸಹಾಯಕ ಪ್ರಾಧ್ಯಾಪಕರು ಮತ್ತು ವಿದ್ಯಾರ್ಥಿಗಳು ಮತ್ತು ಇನ್ನಿತರರು ಇದ್ದರು.

# ಮಕ್ಕಳನ್ನು ಮನುಷ್ಯನನ್ನಾಗಿ ಮಾಡುವವನೇ ತಂದೆ : ಕಾಡ್ಲೂರು

ಯುವ ಮಾರ್ಗ ಸುದ್ದಿ




**ಲಿಂಗಸುಗೂರು,ಜೂ.23–**ಮಕ್ಕಳನ್ನು ಮನುಷ್ಯನನ್ನಾಗಿ ಮಾಡುವವನೇ ನಿಜವಾದ ತಂದೆ ಎಂದು ಖ್ಯಾತ ಸಾಹಿತಿಗಳಾದ ಡಾ.ಶಶಿಕಾಂತ ಕಾಡ್ಲೂರು ಅಭಿಪ್ರಾಯಪಟ್ಟರು.

ಪಟ್ಟಣದ ಲೂರ್ದು ಮಾತೆ ಚರ್ಚ್ ನಲ್ಲಿ ಅಪ್ಪಂದಿರ ದಿನಾಚರಣೆಯನ್ನು ಉದ್ದೇಶಿ ಮಾತನಾಡಿದ ಅವರು,ಮನೆಯ ಜವಾಬ್ದಾರಿಗಳನ್ನು ಹೆಗಲ ಮೇಲೆ ಹೊತ್ತು , ಮನೆಯ ಒಳಗೂ ಹೊರಗೂ ಮನೆಯವರ ಸುರಕ್ಷತೆಗಾಗಿ ಈತ ಸದಾ ಸಿದ್ಧ . ಎರಡೂ ಕೈ ಸೇರಿದರೆ ಚಪ್ಪಾಳೆ ಎನ್ನುವ ಹಾಗೇ ಮನೆ , ಸಂಸಾರ ಸಾಗಬೇಕೆಂದಾಗ ತಾಯಿ ಎಷ್ಟು ವೈರ ಮುಖ್ಯವಾಗುತ್ತಾಳ್ಳೋ ತಂದೆಯೂ ಅಷ್ಟೇ ಮುಖ್ಯ . ಮನೆಯ ಒಳಿತಿಗಾಗಿ ಸದಾ ಶ್ರಮಿ ಸುವವರು ಇವರು . ತಾಯಿ ಅಂತ ಬಂದಾಗ ಆಕೆಯೊಂದಿಗೆ ಭಾವನಾತ್ಮಕ ವಾಗಿ ಬೆರೆಯುತ್ತೇವೆ . ತಾಯಿಯ ಪ್ರತಿಯೊಂದು ಮಾತಿಗೂ ನಮಗೆ “ ಒಲ್ಲೆ ’ ಎನ್ನಲಾಗದು . ಪ್ರತಿಯೊಂದು ಸುಖ , ದುಃಖ , ಖುಷಿ ಎಲ್ಲವನ್ನೂ ತಾಯಿ ಯೊಂದಿಗೆ ಮುಕ್ತವಾಗಿ ಹಂಚಿಕೊಳ್ಳುತ್ತೇವೆ . ಆದರೆ ಬೆಳೆಯುತ್ತಿರುವ ವಯಸ್ಸಿ ನಲ್ಲಿ ತಾಯಿಯೊಂದಿಗೆ ಇರುವಷ್ಟು ಒಡನಾಟ ಅಪ್ಪನ ಬಳಿ ಕಡಿಮೆಯೇ . ತಂದೆಯೆಂದರೆ ಅದೇನೋ ಅವ್ಯಕ್ತ ಭಯ ಚಿಕಂದಿನಿಂದಲೂನಮ್ಮಲ್ಲಿ ಬೆಳೆದು ಬಂದಿರುತ್ತದೆ . ತಂದೆಯೊಡನೆ ಮಾತಿಗಿಳಿಯುವಾಗ ಮನಸ್ಸಿನ ಮೂಲೆಯಲ್ಲಿ ಭಯವನ್ನಿರಿಸಿಕೊಂಡೇ ಮಾತನಾಡುತ್ತೇವೆ . ಅಪ್ಪ ಏನಾಂದಾರೂ ಬೈದರೇ? ಈ ಎಲ್ಲ ಪ್ರಶ್ನೆಗಳು ಮನಸ್ಸಿನಲ್ಲಿ ಹಾದು ಹೋಗುತ್ತವೆ . ಹರೆಯದ ವಯಸ್ಸಿನಲ್ಲಿ ಮಕ್ಕಳಿಗೆ ತಂದೆ ಹಿಟ್ಲರ್‌ನಂತೆ ಕಾಣಿಸುತ್ತಾರೆ . ರಕ್ತ ಕುದಿಯುವ ಆ ವಯಸ್ಸಿನಲ್ಲಿ ತಂದೆಯನ್ನು ಎದುರು ಹಾಕಿಕೊಳ್ಳುವ ಭಂಡ ಧೈರ್ಯ ತೋರಿಸುತ್ತೇವೆ . ವಯಸ್ಸು ಚಿಗುರೊಡೆಯುವ ಆ ಸಮಯಲ್ಲಿ ತಂದೆಗೆ ಎದುರು ಮಾತಾಡಿ ನಮ್ಮ ವಾದವನ್ನು ಗೆದ್ದರೆ ಯುದ್ಧ ಗೆದ್ದ ಹಾಗೆ . ಆದರೆ ಪ್ರತಿಯೊಬ್ಬ ಮಗನು ತಂದೆಯಂತಾಗಲು ಪ್ರಯತ್ನಿಸುತ್ತಾನೆ . ಮಗನಿಗೆ ತಂದೆ ಆದರ್ಶವಾಗುತ್ತಾನೆ ಎಂದರು.

ಈ ಕಾರ್ಯಕ್ರಮ ಸಾನಿಧ್ಯವನ್ನು ವಂ.ಫಾ.ಜೋಸ್ ಪ್ರಕಾಶ, ಕಾನ್ವೆಂಟ್ ಮುಖ್ಯಸ್ಥರಾದ ಸಿಸ್ಟರ್ ಕೀರ್ತಾನ್, ಸಿಸ್ಟರ್ ಶಾಂತಿ ಲವೀನಾ, ಪಾಲನಾ ಸಮಿತಿ ಕಾರ್ಯದರ್ಶಿ ಅಮರೇಶ ಘಂಟಿ, ಮೇಷಕ್, ಮಾರ್ಟಿನ್, ಶಾಂತಪ್ಪ, ಫ್ರಾನ್ಸಿಸ್ ಕುಮಾರ್, ವಿಶ್ವಾಸಪ್ಪ, ತೇರೆಸಾ ಮೇಷಕ್, ಮೇರಿ, ಕಮಲಾಕ್ಷಿ, ತೇರೆಸಾ ಬಸ್ತಾನಿ, ಸುಶೀಲಮ್ಮ ಸೇರಿ ಭಕ್ತರು ಹಾಗೂ ಮಕ್ಕಳು ಇದ್ದರು.

# ದೇವದುರ್ಗದಲ್ಲಿ ತೀವ್ರತರ ಅತಿಸಾರ ಭೇದಿ ನಿಯಂತ್ರಣ ಪಾಕ್ಷಿಕ ಕಾರ್ಯಕ್ರಮ



ಯುವ ಮಾರ್ಗ ಸುದ್ದಿ

**ದೇವದುರ್ಗ,ಜೂ.23–** ದೇವದುರ್ಗದ ಸರಕಾರಿ ಹಿರಿಯ ಪ್ರಾಥಮಿಕ ಶಾಲೆ, ಪಾಟೀಲ್ ಓಣಿಯಲ್ಲಿ ತೀವ್ರತರ ಅತಿಸಾರ ಭೇದಿ ನಿಯಂತ್ರಣ ಪಾಕ್ಷಿಕ ಕಾರ್ಯಕ್ರಮವನ್ನು ಹಮ್ಮಿಕೊಳ್ಳಲಾಗಿತ್ತು. ಈ ಕಾರ್ಯಕ್ರಮವು ಜೂನ್ 16, 2025 ರಿಂದ ಜೂನ್ 31, 2025 ರವರೆಗೆ ನಡೆಯಲಿದ್ದು,

ಕಾರ್ಯಕ್ರಮದಲ್ಲಿ ಆಯುಷ್ ವೈದ್ಯಾಧಿಕಾರಿ ಡಾ. ನಿರ್ಮಲದೇವಿ ಅವರು ಮಾತನಾಡಿ, ಓ.ಆರ್.ಎಸ್ ಮತ್ತು ಜಿಂಕ್ ಅತಿಸಾರ ಭೇದಿಗೆ ಪರಿಣಾಮಕಾರಿ ಚಿಕಿತ್ಸೆಗಳಾಗಿವೆ ಎಂದು ತಿಳಿಸಿದರು. ಮಗುವಿನ ಮಲದ ರೂಪದಲ್ಲಿ ಬದಲಾವಣೆ ಕಂಡುಬಂದಾಗ, ಅಂದರೆ ಸಾಮಾನ್ಯಕ್ಕಿಂತ ಹೆಚ್ಚು ತಿಳಿಯಾಗಿ ಅಥವಾ ನೀರಿ ನಂತೆ ಮಲ ವಿಸರ್ಜನೆಯಾದಾಗ ಅದನ್ನು ಅತಿಸಾರ ಭೇದಿ ಎಂದು ಪರಿಗಣಿಸಬೇಕು ಎಂದರು.

ಡಾ. ನಿರ್ಮಲದೇವಿ ಅವರು ನಿರ್ಜಲೀಕರಣದ ಲಕ್ಷಣಗಳ ಬಗ್ಗೆಯೂ ಮಾಹಿತಿ ನೀಡಿದರು. ಮಗು ಕಿರಿಕಿರಿ ಉಂಟುಮಾಡುವುದು, ಅತಿಯಾದ ನಿದ್ರೆ ಅಥವಾ ಪ್ರಜ್ಞೆ ತಪ್ಪುವುದು, ಕಣ್ಣುಗಳು ಒಳಗೆ ಹೋದಂತೆ ಕಾಣುವುದು, ಅತಿಯಾದ ಬಾಯಾರಿಕೆ ಅಥವಾ ನೀರು ಕುಡಿಯಲು ಸಾಧ್ಯವಾಗದಿರುವುದು (ಎರಡು ತಿಂಗಳ ಮಕ್ಕಳನ್ನು ಹೊರತುಪಡಿಸಿ), ಮತ್ತು ಹೊಟ್ಟೆಯ ಚರ್ಮವನ್ನು ಚಿವುಟಿ ಎಳೆದು ಬಿಟ್ಟಾಗ ನಿಧಾನವಾಗಿ ಮೊದಲಿನ ಸ್ಥಿತಿಗೆ ಬರುವುದು. ಇವು ನಿರ್ಜಲೀಕರಣದ ಮುಖ್ಯ ಲಕ್ಷಣಗಳಾಗಿವೆ. ಇಂತಹ ಲಕ್ಷಣಗಳು ಕಂಡುಬಂದ ತಕ್ಷಣ ವೈದ್ಯರ ಬಳಿ ತೆರಳಿ ಚಿಕಿತ್ಸೆ ಕೊಡಿಸುವಂತೆ ಅವರು ಸಲಹೆ ನೀಡಿದರು.

ಕಾರ್ಯಕ್ರಮದಲ್ಲಿ ಓ.ಆರ್.ಎಸ್ ತಯಾರಿಸುವ ವಿಧಾನ, ಮಕ್ಕಳಿಗಾಗುವ ಲಾಭಗಳು, ಜಿಂಕ್ ಮಾತ್ರೆಯಿಂದ ದೊರೆಯುವ ವಿಶೇಷ ಲಾಭಗಳು, ಮತ್ತು ಸಾಬೂನಿನಿಂದ ಕೈಗಳನ್ನು ಸ್ವಚ್ಛಗೊಳಿಸುವ ಪ್ರಾಮುಖ್ಯತೆ ಹಾಗೂ ಸರಿಯಾದ ಕೈತೊಳೆಯುವ ವಿಧಾನಗಳ ಬಗ್ಗೆ ವಿವರವಾಗಿ ಮಾಹಿತಿ ನೀಡಲಾಯಿತು. ಶಾಲಾ ಮಕ್ಕಳು ವೈಯಕ್ತಿಕ ಶುಚಿತ್ವ ಕಾಪಾಡಿಕೊಳ್ಳುವಂತೆ ಮತ್ತು "ಸ್ವಚ್ಛ ಕೈ ಆರೋಗ್ಯಕ್ಕೆ ಸೈ" ಎಂಬಂತೆ ಯಾವಾಗಲೂ ಕೈಗಳನ್ನು ಸ್ವಚ್ಛವಾಗಿಟ್ಟುಕೊಳ್ಳುವಂತೆ ತಿಳಿಸಲಾಯಿತು. ಊಟದ ಮೊದಲು, ಆಟವಾಡಿದ ನಂತರ, ಶೌಚಾಲಯ ಬಳಸಿದ ನಂತರ ಮತ್ತು ಪ್ರಾಣಿ–ಪಕ್ಷಿಗಳನ್ನು ಮುಟ್ಟಿದ ನಂತರ ಸೋಪು ಮತ್ತು ನೀರಿನಿಂದ ಕೈಗಳನ್ನು ಸ್ವಚ್ಛಗೊಳಿಸುವ ಮಹತ್ವವನ್ನು ಒತ್ತಿಹೇಳಲಾಯಿತು.

ಈ ಸಂದರ್ಭದಲ್ಲಿ ಡಾ. ನಾಗೇಶ್, ಡಾ. ಸುಫಿಯ, ಬಿ.ಹೆಚ್.ಇ.ಒ ಗೀತಮ್ಮ, ಶಾಲೆಯ ಮುಖ್ಯ ಶಿಕ್ಷಕರು ಪವಿತ್ರ, ಸಹಶಿಕ್ಷಕರು, ಆಶಾ ಕಾರ್ಯಕರ್ತೆಯರಾದ ಸುಜಾತ ಮತ್ತು ಮಹ್ಮದಿ ಸೇರಿದಂತೆ ಅನೇಕ ವಿದ್ಯಾರ್ಥಿಗಳು ಭಾಗವಹಿಸಿದ್ದರು.

# ಸಚಿವ ಜಮೀರ್ ವಿರುದ್ಧ ತನಿಖೆಗೆ ರಾಜ್ಯಪಾಲರಿಗೆ ದೂರು

**ಬೆಂಗಳೂರು,ಜೂ.23–**ವಸತಿ ಮನೆಗಳ ಮಂಜೂರಾತಿಗೆ ಲಂಚ ಪಡೆಯುತ್ತಿರುವ ಪ್ರಕರಣವನ್ನು ವಿಶೇಷ ತನಿಖಾ ದಳದ ಮೂಲಕ ವಿಚಾರಣೆಗೊಳಪಡಿಸಲು ಆದೇಶಿಸಬೇಕು ಮತ್ತು ಆರೋಪಕ್ಕೆ ಗುರಿಯಾಗಿರುವ ಸಚಿವರ ವಿರುದ್ಧ ಅಭಿಯೋಜನೆಗೆ ಅವಕಾಶ ನೀಡಬೇಕು ಎಂದು ರಾಜ್ಯಪಾಲರಿಗೆ ದೂರು ನೀಡಲಾಗಿದೆ.

ಸಾಮಾಜಿಕ ಕಾರ್ಯಕರ್ತ ದಿನೇಶ್ ಕಲ್ಲಳ್ಳಿ ಅವರು ರಾಜಪಾಲ ಥಾವರ್‌ಚಂದ್ ಗೆಹ್ಲೋಟ್ ಅವರಿಗೆ ದೂರು ನೀಡಿದ್ದು, ಶಾಸಕ ಹಾಗೂ ರಾಜ್ಯನೀತಿ ಆಯೋಗದ ಉಪಾಧ್ಯಕ್ಷ ಬಿ.ಆರ್.ಪಾಟೀಲ್ ಹೇಳಿಕೆಯನ್ನು ಉಲ್ಲೇಖಿಸಿದ್ದಾರೆ.

ಲಂಚ ನೀಡಿದವರಿಗಷ್ಟೆ ಮನೆ ನೀಡಲಾಗುತ್ತಿದೆ ಎಂದು ಶಾಸಕರು ಹೇಳಿಕೆ ನೀಡಿದ್ದಾರೆ. ಇದು ನಿಜವೇ ಆಗಿದ್ದರೆ ಸಂವಿಧಾನದ ಉಲ್ಲಂಘನೆ ಮತ್ತು ಸಾರ್ವಜನಿಕ ಹಕ್ಕುಗಳ ಹರಣವಾಗುತ್ತದೆ. ಭ್ರಷ್ಟಾಚಾರ ನಿಗ್ರಹ ಕಾಯ್ದೆಯಡಿ ಗಂಭೀರ ಸ್ವರೂಪದ ಅಪರಾಧವಾಗಿದೆ ಎಂದಿದ್ದಾರೆ.

ಸುದ್ದಿ ಮತ್ತು ಜಾಹೀರಾತಿಗಾಗಿ ಸಂಪರ್ಕಿಸಿ
9743497111, 9743496111

# ಆಷಾಢ ಶುಕ್ರವಾರಕ್ಕೆ ಸಜ್ಜಾದ ಚಾಮುಂಡಿ ಬೆಟ್ಟ

**ಮೈಸೂರು, ಜೂ.23–** ಆಷಾಡ ಶುಕ್ರವಾರ ಹಿನ್ನೆಲೆಯಲ್ಲಿ ನಾಡಿನ ಅಧಿದೇವತೆ ಚಾಮುಂಡೇಶ್ವರಿ ದೇವಾಲಯದಲ್ಲಿ ಸಿದ್ಧತೆಗಳು ಭರದಿಂದ ಸಾಗಿವೆ.ಚಾಮುಂಡೇಶ್ವರಿ ಬೆಟ್ಟ ಅಭಿವೃದ್ಧಿ ಪ್ರಾಧಿಕಾರ ಹಾಗೂ ಜಿಲ್ಲಾಡಳಿತ ಎಲ್ಲಾ ಸಿದ್ದತೆಗಳನ್ನೂ ಮಾಡಿಕೊಳ್ಳುತ್ತಿದ್ದು, ಚಾಮುಂಡೇಶ್ವರಿ ದೇವಾಲಯ, ನಗರ ಬಸ್ ನಿಲ್ದಾಣದಿಂದ ಎರಡು ಬಸ್ ಬೇಗಳನ್ನು ನಿರ್ಮಾಣ ಮಾಡಿ ಎರಡು ಕೌಂಟರ್‌ಗಳಲ್ಲಿ 300 ರೂ. ಟಿಕೆಟ್ ಕೊಡಲು ವ್ಯವಸ್ಥೆ ಮಾಡಲಾಗಿದೆ.



300 ರೂ. ಟಿಕೆಟ್ ಪಡೆಯುವವರು ನಗರ ಬಸ್ ನಿಲ್ದಾಣದಲ್ಲಿ ಪಡೆಯಬೇಕು. ಯಾವುದೇ ಕಾರಣಕ್ಕೂ ಚಾಮುಂಡಿ ಬೆಟ್ಟದಲ್ಲಿ ಕೊಡಲಾಗುವುದಿಲ್ಲ.ಬಸ್ ನಿಲ್ದಾಣದ ಕೌಂಟರ್‌ಗಳಲ್ಲಿ ಟಿಕೆಟ್ಗಳನ್ನು ತೆಗೆದುಕೊಳ್ಳಬೇಕು. ಹಾಗೂ ಲಲಿತ ಮಹಲ್ ಪಾರ್ಕಿಂಗ್ ಲಾಟ್‌ನಲ್ಲಿ ಮೂರು ಕೌಂಟರ್ ಬಸ್ ಬೇ ಗಳನ್ನು ನಿರ್ಮಾಣ ಮಾಡಲಾಗುತ್ತಿದೆ.

ಜನರಲ್ ಹಾಗೂ 300 ರೂ. ಹಾಗೂ 2000 ರೂ. ಕೌಂಟರ್‌ಗಳನ್ನು ತೆರೆಯಲಾಗುತ್ತಿದೆ. ಲಲಿತ ಮಹಲ್ ಹೆಲಿಪಾಡ್‌ನಲ್ಲಿ ಹತ್ತರಿಂದ ಹದಿನೈದು ಟಿಕೆಟ್ ಕೌಂಟರ್‌ಗಳನ್ನು ತೆರೆಯಲಾಗುತ್ತಿದೆ. ಯುಪಿಐ, ಫೋನ್ ಪೇ, ಗೂಗಲ್ ಪೇ. ಗಳಿಗಾಗಿ ಪ್ರತ್ಯೇಕ ಕ್ಯೂ ಮಾಡಲಾಗಿದೆ.ಎಐ ಕ್ಯಾಮೆರಾಗಳು ಲೈಟ್, ಪಾರ್ಕಿಂಗ್ ವ್ಯವಸ್ಥೆಯಲ್ಲಿ ಇರುತ್ತದೆ ಜನರಲ್ ಬಸ್ ಕ್ಯೂ ಬೇರೆ ಇರುತ್ತದೆ ಹಾಗೂ 2,000 ರೂ. ವೋಲ್ವೋ ಬಸ್ ಕ್ಯೂ, ಬೇರೆ ಇರುತ್ತದೆ.

ಲಲಿತ ಮಹಲ್ ಹೆಲಿಪ್ಯಾಡ್‌ನಲ್ಲಿ ಶೌಚಾಲಯ ದೀಪದ ವ್ಯವಸ್ಥೆ ಮಾಡಲಾತ್ತಿದೆ.

ಭಕ್ತಾದಿಗಳು ತಂದ ಪ್ರಸಾದಗಳನ್ನು ಹಂಚಲು ಲಲಿತ ಮಹಲ್ ಹೆಲಿಪ್ಯಾಡ್‌ನಲ್ಲಿ ವ್ಯವಸ್ಥೆ ಮಾಡಲಾಗಿದೆ.ಖಾಸಗಿ ವಾಹನಗಳು ಕಾರು, ಬಸ್, ದ್ವಿಚಕ್ರ ವಾಹನಗಳನ್ನು ಬೆಟ್ಟದ ಮೇಲೆ ನಿರ್ಬಂಧಿಸಲಾಗಿದೆ. 300 ರೂ. ಕೊಟ್ಟು ಟಿಕೆಟ್ ತೆಗೆದುಕೊಂಡವರಿಗೆ ಸರದಿ ಸಾಲಿನಲ್ಲಿ ನಿಂತವರಿಗೆ ಡ್ರೈ ಫ್ರೂಟ್ ಪಾಕೆಟ್ ಗಳನ್ನು ಹಂಚಲಾಗುತ್ತದೆ.

ವಿಶೇಷ ಚೇತನರಿಗೆ ವೀಲ್ ಚೇರ್, ಮೆಡಿಕಲ್ ವ್ಯವಸ್ಥೆ ಕೂಡಾ ಇರುತ್ತದೆ ಹಾಗೂ ಸದಾ ಚಾಮುಂಡಿ ಬೆಟ್ಟದ ದೇವಸ್ಥಾನದ ಬಳಿ ಅಂಬುಲೆನ್ಸ್ ವ್ಯವಸ್ಥೆ ಇರುತ್ತದೆ.300 ರೂ. ಕೊಟ್ಟು ಬಂದ ಭಕ್ತಾದಿಗಳಿಗೆ 30 ರೂ. ಟಿಕೆಟ್ ಕೌಂಟರ್ ಬಳಿ ಸೇರಿಸಲಾಗುತ್ತದೆ. ಅಲ್ಲಿ ಬ್ಯಾರಿಕೆಡ್ ವ್ಯವಸ್ಥೆ ಮಾಡಿರುತ್ತದೆ.

ಧರ್ಮದರ್ಶನದ ಕ್ಯೂ ಬೇರೆ ಇರುತ್ತದೆ. ಸರದಿ ಸಾಲಿನಲ್ಲಿ ಬರುವ ಭಕ್ತಾದಿಗಳಿಗಾಗಿ ವಾಟರ್ ಬಾಟಲ್, ಶೌಚಾಲಯದ ವ್ಯವಸ್ಥೆಯನ್ನು ಚಾಮುಂಡಿ ಬೆಟ್ಟದಲ್ಲಿ ಮಾಡಲಾಗಿದೆ.

300 ರೂ. ಟಿಕೆಟ್ ಕೊಟ್ಟು ಬಂದವರಿಗಾಗಿ ಬಾದಾಮಿ ಹಾಲು ವಿತರಿಸಲಾಗುತ್ತದೆ. 3 ವಲಯಗಳನ್ನಾಗಿ ಮಾಡಲಾಗಿರುತ್ತದೆ. ಎಲ್ಲಾ ವಲಯಗಳಲ್ಲೂ ಬಾದಾಮಿ ಹಾಲು ವಿತರಣೆ ಮಾಡಲಾಗುತ್ತದೆ.

ಚಾಮುಂಡಿ ಬೆಟ್ಟದಲ್ಲಿ ಸರದಿ ನಿಂತವರಿಗೆ ಐದು ಕಡೆಗಳಲ್ಲಿ ಶೌಚಾಲಯದ ವ್ಯವಸ್ಥೆ ಮಾಡಲಾಗಿದೆ. ದರ್ಶನ ಪಡೆದು ಹೊರಬರುವವರಿಗೆ ಒಂದೇ ಗೇಟ್ ನಲ್ಲಿ ಬರಬೇಕು, 2000 ಹಾಗೂ ವಿವಿಐಪಿ ಸಾಲಲ್ಲಿ ಬಂದವರು ಮಹಿಷಾಸುರ ಪ್ರತಿಮೆ ಬಳಿ ಇಳಿದುಕೊಂಡು ಬರಬೇಕು.

ಅಲ್ಲಿಂದ ರೆವಿನ್ಯು ಡಿಪಾರ್ಟ್ ಮೆಂಟ್ ಹಾಗೂ ಪ್ರತಿ ಪಾಯಿಂಟ್ ನಲ್ಲೂ ಇನ್‌ಸ್ಪೆಕ್ಟರ್‌ಗಳು, ಅಧಿಕಾರಿಗಳು ಇರುತ್ತಾರೆ. ಅವರು ನೇರ ದರ್ಶನಕ್ಕೆ ಅವಕಾಶ ಮಾಡಿಕೊಡುತ್ತಾರೆ.

2000 ರೂ. ಟಿಕೆಟ್ ತೆಗೆದುಕೊಂಡವರಿಗೆ ಬೇರೆಯದೇ ಸರದಿ ಸಾಲುಗಳು ಇರುತ್ತವೆ. ಚಾಮುಂಡೇಶ್ವರಿ ಅಮ್ಮನವರ ದರ್ಶನಕ್ಕೆ ಯಾವುದೇ ರೀತಿಯ ಗರ್ಭಗುಡಿ ಗೇಟ್ ತೆಗೆದು ಪ್ರವೇಶ ಇರುವುದಿಲ್ಲ.ಚಾಮುಂಡಿ ಬೆಟ್ಟ ಹತ್ತುವವರಿಗೆ ನಮ್ಮ ಮೈಸೂರು ಫೌಂಡೇಶನ್ ವತಿಯಿಂದ ಸಹಾಯವಾಣಿ ಇರುತ್ತದೆ.

ನಮ್ಮ ಮೈಸೂರು ಫೌಂಡೇಶನ್ ಹಾಗೂ ಸಾಲಿಡ್ ವೇಸ್ಟ್ ಮ್ಯಾನೇಜೆಂಟ್ ನವರು ಚಾಮುಂಡಿ ಬೆಟ್ಟದಲ್ಲಿ ಬರುವ ವೆಸ್ಟೇಜ್ ಗಳನ್ನು ಶುಚಿ ಮಾಡುವ ಹೊಣೆ ಹೊತ್ತಿದ್ದಾರೆ.ಚಾಮುಂಡಿ ಬೆಟ್ಟ ಮೆಟ್ಟಿಲು ಹತ್ತಿ ಬರುವ ಭಕ್ತರನ್ನು 30 ರೂಪಾಯಿ ಟಿಕೆಟ್ ಕೌಂರ್ಟ ಬಳಿ ಸೇರಿಸಲಾಗುತ್ತದೆ ಅವರನ್ನು ಜನರಲ್ ಕ್ಯೂ ಮುಂದೆ ಬಂದು ಕನೆಕ್ಟ್ ಆದಾಗ ಅಲ್ಲಿಂದ ಅವರು ದರ್ಶನ ಪಡೆಯಬಹುದು.

ಭಕ್ತಾದಿಗಳು ದರ್ಶನ ಮಾಡಿಕೊಂಡು ವಾಪಸ್ ಬಸ್ ಹತ್ತುವಾಗ ಎರಡು ಕಡೆ ಊಟದ ವ್ಯವಸ್ಥೆ ಮಾಡಲಾಗಿರುತ್ತದೆ. ಬಸ್ ಸ್ಟ್ಯಾಂಡ್ ಒಳಗಡೆ ಊಟದ ವ್ಯವಸ್ಥೆ ಇರುತ್ತದೆ ಹಾಗೂ ದಾಸೋಹ ಭವನದಲ್ಲೂ ಊಟದ ವ್ಯವಸ್ಥೆ ಇರುತ್ತದೆ. ಎಲ್ಲಾ ಕಡೆ ನೀರು ಕರೆಂಟು ಶೌಚಾಲಯದ ವ್ಯವಸ್ಥೆ ಮಾಡಲಾಗಿದೆ.ಆಷಾಢ ಶುಕ್ರವಾರಗಳಿಗಾಗಿಯೇ ಜಿಲ್ಲಾಧಿಕಾರಿ ಲಕ್ಷ್ಮಿಕಾಂತ ರೆಡ್ಡಿ, ಪೊಲೀಸ್ ಆಯುಕ್ತರಾದ ಸೀಮ್ ಲಾಟ್ಕರ್, ಡಿಸಿಪಿಗಳಾದ ಮುತ್ತುರಾಜ್ ಹಾಗು ಸುಂದರರಾಜ್ ಅವರ ಮಾರ್ಗದರ್ಶನದಲ್ಲಿ ಐದು ಬಾರಿ ಚಾಮುಂಡಿ ಬೆಟ್ಟದಲ್ಲಿ ಸಭೆಗಳನ್ನು ಮಾಡಿ ಅವರ ಮಾರ್ಗದರ್ಶನದಲ್ಲಿ ಎಲ್ಲಾ ಸಜ್ಜಾಗಿದೆ ಎಂದು ಚಾಮುಂಡೇಶ್ವರಿ ಬೆಟ್ಟದ ಕಾರ್ಯದರ್ಶಿಗಳಾದ ಜೆ.ಎ.ರೂಪಾ ತಿಳಿಸಿದರು.

# ಶಾಸಕ ರಾಜು ಕಾಗೆ ರಾಜೀನಾಮೆ ಬೆದರಿಕೆ



**ಬೆಂಗಳೂರು,ಜೂ.23–** ಬಿ.ಆರ್.ಪಾಟೀಲರ ಬಳಿಕ ಈಗ ಆಡಳಿತ ಪಕ್ಷದ ಮತ್ತೊಬ್ಬ ಶಾಸಕ ರಾಜ್ಯಸರ್ಕಾರದ ವಿರುದ್ಧ ತಿರುಗಿಬಿದ್ದಿದ್ದು, 2–3 ದಿನದಲ್ಲಿ ರಾಜೀನಾಮೆ ನೀಡುವ ಬೆದರಿಕೆ ಹಾಕಿದ್ದಾರೆ.

ಬೆಳಗಾವಿ ಜಿಲ್ಲೆಯ ಕಾಗವಾಡ ಕ್ಷೇತ್ರದ ಭರಮಗೌಡ ಅಲಗೌಡ ಕಾಗೆ ಬಹಿರಂಗವಾಗಿ ಹೇಳಿಕೆ ನೀಡಿದ್ದು, ರಾಜ್ಯಸರ್ಕಾರದ ಆಡಳಿತ ವ್ಯವಸ್ಥೆ ಸಂಪೂರ್ಣ ಕುಸಿದಿದೆ ಎಂದು ವಾಗ್ದಾಳಿ ನಡೆಸಿದ್ದಾರೆ. 2 ವರ್ಷಗಳ ಹಿಂದೆ ತಮ ಕ್ಷೇತ್ರಕ್ಕೆ ವಿಶೇಷ ಅನುದಾನದಡಿ 25 ಕೋಟಿ ರೂ.ಗಳನ್ನು ಮಂಜೂರು ಮಾಡಲಾಗಿತ್ತು.

ಅದರಲ್ಲಿ 12 ಕೋಟಿ ರೂ.ಗಳನ್ನು ರಸ್ತೆಯ ಅಭಿವೃದ್ಧಿಗೆ ನಿಗದಿಯಾಗಿದ್ದರೆ ಉಳಿದ 13 ಕೋಟಿ ರೂ.ಗಳನ್ನು 72 ಸಮುದಾಯ ಭವನಗಳ ನಿರ್ಮಾಣಕ್ಕೆ ಪ್ರಸ್ತಾವನೆ ಸಲ್ಲಿಸಲಾಗಿದೆ. ಆದರೆ ಈವರೆಗೂ ಕಾರ್ಯಾದೇಶ ನೀಡಲಾಗಿಲ್ಲ ಎಂದು ಆರೋಪಿಸಿದ್ದಾರೆ.

ಯಾವ ಕಾರಣಕ್ಕೆ ಕಾರ್ಯಾದೇಶ ನೀಡಲಾಗಿಲ್ಲ ಎಂಬುದು ನನಗೆ ಗೊತ್ತಿಲ್ಲ. ಅಳಂದ ಕ್ಷೇತ್ರದ ಶಾಸಕ ಬಿ.ಆರ್.ಪಾಟೀಲ್ ಹೇಳಿದ್ದಕ್ಕಿಂತಲೂ ಭೀಕರ ಪರಿಸ್ಥಿತಿ ತಮ ಕ್ಷೇತ್ರದಲ್ಲಿದೆ. ಅಧಿಕಾರಿಗಳು 2 ವರ್ಷವಾದರೂ ಕಾರ್ಯಾದೇಶ ಕೊಡದೇ ಇರುವುದಕ್ಕೆ ಕಾರಣಗಳೇನು ಎಂದು ತಮಗೆ ಗೊತ್ತಿಲ್ಲ ಎಂದಿದ್ದಾರೆ.

ಬಿ.ಆರ್.ಪಾಟೀಲ್ ಹೇಳಿದ್ದಕ್ಕೆ ನನ್ನ ಸಹಮತ ಇದೆ. ನನ್ನ ಮನಸ್ಸಿಗೆ ತುಂಬಾ ನೋವಾಗಿದೆ. ರಾಜೀನಾಮೆ ನೀಡುವ ಮನಸ್ಥಿತಿಯಲ್ಲಿದ್ದೇನೆ. 2–3 ದಿನಗಳಲ್ಲಿ ಮುಖ್ಯಮಂತ್ರಿಯವರನ್ನು ಭೇಟಿ ಮಾಡಿ ರಾಜೀನಾಮೆ ಕೊಟ್ಟರೂ ಅಚ್ಚರಿ ಇಲ್ಲ ಎಂದು ಹೇಳಿದ್ದಾರೆ. ಇದು ಕಾಂಗ್ರೆಸ್‌ನಲ್ಲೆ ಭಾರೀ ಸಂಚಲನ ಸೃಷ್ಟಿಸಿದೆ.ಆಡಳಿತ ಪಕ್ಷದಲ್ಲೆ ಒಬ್ಬರಾದ ಮೇಲೆ ಒಬ್ಬ ಶಾಸಕರು ತಿರುಗಿ ಬೀಳುತ್ತಿದ್ದು, ಸರ್ಕಾರಕ್ಕೆ ತೀವ್ರ ಮುಜುಗರ ಉಂಟು ಮಾಡುತ್ತಿದೆ.

# ಬೆಂಗಳೂರಲ್ಲಿ ಸುಮಾರು 19 ಸಾವಿರ ಕೋಟಿ ವೆಚ್ಚದ ಟನಲ್ ರಸ್ತೆ ನಿರ್ಮಾಣಕ್ಕೆ ಟೆಂಡರ್


**ಬೆಂಗಳೂರು, ಜೂ. 23–** ಸಿಲಿಕಾನ್ ಸಿಟಿಯಲ್ಲಿ ಟನಲ್ ರಸ್ತೆ ನಿರ್ಮಾಣದ ಕಾರ್ಯ ಚುರುಕುಪಡೆದುಕೊಂಡಿದೆ.ಬಹು ನಿರೀಕ್ಷಿತ ಟನಲ್ ರಸ್ತೆ ನಿರ್ಮಾಣಕ್ಕೆ ಟೆಂಡರ್ ಕರೆಯಲು ರಾಜ್ಯ ಸರ್ಕಾರ ಅನುಮತಿ ನೀಡಿದ್ದು, ಇಂದು ಟನಲ್ ರಸ್ತೆ ನಿರ್ಮಾಣಕ್ಕೆ ಟೆ ಂಡರ್ ಕರೆಯಲಾಗುತ್ತಿದೆ. ಸುಮಾರು 19 ಸಾವಿರ ಕೋಟಿ ವೆಚ್ಚದಲ್ಲಿ ಸುರಂಗ ಮಾ ರ್ಗ ನಿರ್ಮಾಣವಾಗಲಿದ್ದು, ನಗರದ ಹೆಬ್ಬಾ ಳ ಜಂಕ್ಷನ್ ನಿಂದ ಸಿಲ್ಕ್ ಬೋರ್ಡ್ ಜಂಕ್ಷನ್ ವರೆಗಿನ 17 ಕಿ.ಮೀ ಉದ್ದದ ಸುರಂಗ ಮಾರ್ಗ ನಿರ್ಮಾಣ ಮಾಡಲಾಗುತ್ತಿದೆ ಸ್ಟೈಲ್ ಸಂಸ್ಥೆ ಮುಖ್ಯಸ್ಥ ಪ್ರಹ್ಲಾದ್ ತಿಳಿಸಿದ್ದಾರೆ.

ಉದ್ದೇಶಿತ ಟನಲ್ ರಸ್ತೆಯಲ್ಲಿ ಸಂಚರಿಸುವ ವಾಹನಗಳಿಗೆ ಟೋಲ್ ಫಿಕ್ಸ್ ಮಾಡಲು ತೀರ್ಮಾನಿಸಲಾಗಿದೆ. ಟನಲ್ ರಸ್ತೆಯ ಟೋಲ್ ವಸೂಲಿಗೆ ಸಚಿವ ಸಂಪುಟ ಸಭೆಯಲ್ಲಿ ಆಡಳಿತಾತ್ಮಕ ಅನುಮೋದನೆ ದೊರೆತಿದೆ. ಪ್ರತೀ ಕಿ.ಮೀಗೆ 19 ರೂಪಾಯಿ ಟೋಲ್ ವಿಧಿಸುವ ಬಗ್ಗೆ ಪ್ರಸ್ತಾವನೆ ಸಲ್ಲಿಸಲಾಗಿದೆ ಎಂದು ಅವರು ಮಾಹಿತಿ ನೀಡಿದ್ದಾರೆ.ಮುಂಬೈ ಮಾದರಿಯಲ್ಲಿ ಇಲ್ಲಿಯೂ ಟೋಲ್ ವಿಧಿಸಲು ಬಿಬಿಎಂಪಿ ಪ್ರಸ್ತಾವನೆ ಸಲ್ಲಿಸಿದೆ. ನಾಲ್ಕು ಚಕ್ರದ ವಾಹನಗಳಿಗೆ ಏಕ ಸಂಚಾರದ ಪೂರ್ಣ ಉದ್ದದ ಸುರಂಗ ಮಾರ್ಗ ಬಳಕೆಗೆ, ಪ್ರತಿ ಕಿ.ಮೀಗೆ ಕನಿಷ್ಠ 19 ರೂಪಾಯಿ ಟೋಲ್ ವಿಧಿಸುವ ಸಾಧ್ಯತೆಗಳಿವೆ.

ಉದ್ದೇಶಿತ ಟನಲ್ ರಸ್ತೆ 2029ಕ್ಕೆ ಪೂರ್ಣಗೊಳ್ಳುವ ಸಾಧ್ಯತೆ ದಿದ್ದು, 2029 ರಿಂದ 2030ರ ಅವಧಿಗೆ 19 ರೂಪಾಯಿ ಪ್ರತಿ ಕಿ.ಮೀಗೆ ವಿಧಿಸಲು ನಿರ್ಧರಿಸಲಾಗಿದೆ ಎಂದು ತಿಳಿದುಬಂದಿದೆ.

**ಸಮಸ್ಯೆಗಳ ಸರಮಾಲೆ:** ಜನ ನಿಬಿಡ ಪ್ರದೇಶದಲ್ಲಿ ಟನಲ್ ರಸ್ತೆ ನಿರ್ಮಾಣ ಮಾಡುವುದರಿಂದ ಸಮಸ್ಯೆಗಳ ಸರಮಾಲೆಯೇ ಎದುರಾಗಲಿದೆ.

ನಗರದ ಸುಮಾರು 20 ಸಾವಿರಕ್ಕೂ ಹೆಚ್ಚು ಕುಟುಂಬಗಳಿಗೆ ಈ ಯೋಜನೆಯಿಂದ ಭಾರಿ ಸಮಸ್ಯೆ ಎದುರಾಗಲಿದೆ. ಸುಮಾರು 10 ಸಾವಿರಕ್ಕೂ ಹೆಚ್ಚು ಮನೆಗಳಿಗೆ ನೀರಿನ ಅಭಾವ ಸೃಷ್ಟಿಯಾಗಲಿದೆ. ಬೃಹತ್ ಕಟ್ಟಡಗಳ ಅಡಿಪಾಯ ಕ್ಕೆ ತೊಂದರೆಯಾಗಲಿದೆ ಎಂದು ತಜ್ಞರು ಎಚ್ಚರಿಕೆ ನೀಡಿದ್ದಾರೆ.




ಟನಲ್ ರಸ್ತೆ ನಿರ್ಮಾಣ ದಿಂದ ಮನೆಗಳ ಬೋರ್‌ವೆಲ್ ಗಳಿಗೆ ಸಂಚಕಾರ ಕಾಣಿಸಿಕೊಳ್ಳಲಿದೆ. ಟನಲ್ ರಸ್ತೆ ನಿರ್ಮಾಣಕ್ಕೆ ಅಂತ ಸುಮಾರು ಒಂದು ಸಾವಿರ ಅಡಿ ಅಳಕ್ಕೆ ರಸ್ತೆ ಅಗೆಯಬೇಕು ಇದರಿಂದ ಹೀಗಾಗಿ 800ರಿಂದ 1100 ಅಡಿಗಳಷ್ಟು ಭೂಮಿ ಕೊರೆಸಿ ಬೋರ್‌ವೆಲ್ ಹಾಕಿಸಿಕೊಂಡಿರುವ ಸಾವಿರಾರು ಮನೆಗಳು ನೀರಿನ ಸಂಪರ್ಕ ಕಡಿದುಕೊ ಳ್ಳಬೇಕಾಗುತ್ತದೆ.

ಇದರ ಜೊತೆಗೆ ಸಾವಿರಾರು ಮನೆಗಳ ಅಡಿಪಾಯಗಳಿಗೂ ಅಪಾಯ ಕಟ್ಟಿಟ್ಟ ಬುತ್ತಿ ಆಗಿರುವುದರಿಂದ ಉದ್ದೇಶಿತ ಟನಲ್ ರಸ್ತೆ ಹಲವಾರು ಸಮಸ್ಯೆಗಳನ್ನು ಹುಟ್ಟು ಹಾಕಲಿದೆ ಎಂದು ತಜ್ಞರು ಎಚ್ಚರಿಕೆ ನೀಡಿದ್ದಾರೆ.ಆದರೂ ಸರ್ಕಾರ ಟನಲ್ ರಸ್ತೆ ನಿರ್ಮಾಣಕ್ಕೆ ಮುಂದಾಗಿರುವುದು ಯಾವ ಪುರುಷಾರ್ಥಕ್ಕೆ ಎಂದು ಸಾಮಾನ್ಯ ಜನರು ಪ್ರಶ್ನಿಸುತ್ತಿದ್ದಾರೆ.

# ಶಾಸಕರ ಅಸಮಾಧಾನ ಬಗೆಹರಿಸುವೆ:ಸಿಎಂ



**ಬೆಂಗಳೂರು,ಜೂ.23–** ಕಾಂಗ್ರೆಸ್ ಶಾಸಕರ ಅಸಮಾಧಾನವನ್ನು ನಾನು ಬಗೆಹರಿಸುತ್ತೇನೆ ಎಂದು ಮುಖ್ಯಮಂತ್ರಿ ಸಿದ್ದರಾಮಯ್ಯ ಹೇಳಿದ್ದಾರೆ.ಸುದ್ದಿಗಾರರೊಂದಿಗೆ ಮಾತನಾಡಿದ ಅವರು, ಬಿ.ಆರ್.ಪಾಟೀಲ್ ಅವರನ್ನು ರಾಯಚೂರಿಗೆ ಆಗಮಿಸಲು ನಾನು ಕರೆದಿದ್ದೆ. ಆದರೆ ಕಾರ್ಯಕ್ರಮಕ್ಕೆ ನನಗೆ ಆಹ್ವಾನವಿಲ್ಲ. ಹಾಗಾಗಿ ಬರುವುದಿಲ್ಲ ಎಂದು ಅವರು ಸ್ಪಷ್ಟಪಡಿಸಿದ್ದಾರೆ. ಇದೇ 25 ಕ್ಕೆ ಬಂದು ತಮನ್ನು ಭೇಟಿಯಾಗುವುದಾಗಿ ತಿಳಿಸಿದ್ದಾರೆ. ಅವರೊಂದಿಗೆ ನಾನು ಚರ್ಚೆ ಮಾಡುತ್ತೇನೆ ಎಂದರು.

ಕಾಗವಾಡ ಕ್ಷೇತ್ರದ ಶಾಸಕ ರಾಜು ಕಾಗೆ ನೀಡಿರುವ ಹೇಳಿಕೆ ಬಗ್ಗೆ ನನಗೆ ಮಾಹಿತಿ ಇಲ್ಲ. ಅವರೊಂದಿಗೂ ಚರ್ಚೆ ಮಾಡುತ್ತೇನೆ ಎಂದರು.ಮುಖ್ಯಮಂತ್ರಿಯವರ ವಿಶೇಷ ಅನುದಾನ ಎಂದು ಯಾವುದೂ ಇಲ್ಲ. ಬಜೆಟ್‌ನಲ್ಲಿ ಆ ರೀತಿ ಪ್ರಸ್ತಾಪಗಳಿರುವುದಿಲ್ಲ. ರಾಜು ಕಾಗೆ ಅವರಿಗೆ ಮುಖ್ಯಮಂತ್ರಿಯವರ ವಿಶೇಷ ಅನುದಾನ ಎಂದು ಯಾವ ರೂಪದಲ್ಲಿ ಕೊಡಲಾಗಿದೆಯೋ ಗೊತ್ತಿಲ್ಲ. ಅಗತ್ಯ ಇರುವ ಕಡೆಗೆ ವಿಶೇಷವಾಗಿ ಅನುದಾನ ನೀಡಬೇಕಾಗುತ್ತದೆ. ಆದರೆ ಮುಖ್ಯಮಂತ್ರಿಯವರ ಅನುದಾನ ಎಂದು ಯಾವುದೂ ಇಲ್ಲ ಎಂದರು.

ಶಾಸಕ ಬೇಳೂರು ಗೋಪಾಲಕೃಷ್ಣ ಸಚಿವ ಜಮೀರ್ ಅಹಮದ್ ಖಾನ್‌ರ ರಾಜೀನಾಮೆಗೆ ಒತ್ತಾಯಿಸಿರುವ ಬಗ್ಗೆ ನನಗೆ ಮಾಹಿತಿ ಇಲ್ಲ ಎಂದರು. ಕಾಂಗ್ರೆಸ್ ಪಕ್ಷದಲ್ಲಿ ಶಾಸಕರ ಅಸಮಾಧಾನಗಳು ಹೆಚ್ಚುತ್ತಿರುವ ಬಗ್ಗೆ ಸಿಡಿಮಿಡಿ ವ್ಯಕ್ತಪಡಿಸಿದ ಮುಖ್ಯಮಂತ್ರಿಯವರು, ಅಸಮಾಧಾನವನ್ನು ನೀವು ಹೋಗಲಾಡಿಸಲು ಸಾಧ್ಯವೇ ಎಂದು ಮಾಧ್ಯಮದವರನ್ನು ಪ್ರಶ್ನಿಸಿದರಲ್ಲದೆ, ನಾನು ಕರೆದು ಮಾತನಾಡುತ್ತೇನೆ, ಸಮಾಧಾನಪಡಿಸುತ್ತೇನೆ ಎಂದು ಹೇಳಿದರು.

ಅಕ್ರಮ ಗಣಿಗಾರಿಕೆಗೆ ಸಂಬಂಧಪಟ್ಟಂತೆ ಸಚಿವ ಎಚ್.ಕೆ.ಪಾಟೀಲ್ ಪತ್ರ ಬರೆದು ವಿಶೇಷ ನ್ಯಾಯಾಲಯ ಸ್ಥಾಪಿಸಿ ಬೊಕ್ಕಸಕ್ಕಾಗಿರುವ ನಷ್ಟವನ್ನು ವಸೂಲಿ ಮಾಡಬೇಕಿದೆ. ಈ ಹಿನ್ನೆಲೆಯಲ್ಲಿ ಸಚಿವ ಸಂಪುಟ ಸಭೆಯಲ್ಲಿ ವಿಷಯ ಚರ್ಚೆ ನಡೆಸುವಂತೆ ಸಲಹೆ ನೀಡಿದ್ದಾರೆ ಎಂದರು.ಈ ಹಿಂದೆ ಲೋಕಾಯುಕ್ತರಾಗಿದ್ದ ಸಂತೋಷ್ ಹೆಗ್ಡೆ ಅಕ್ರಮ ಗಣಿಗಾರಿಕೆಯ ಬಗ್ಗೆ ವರದಿ ನೀಡಿದ್ದರು.ಅದನ್ನು ನಾನು ವಿಧಾನಸಭೆಯಲ್ಲಿ ಪ್ರಸ್ತಾಪ ಮಾಡಿದಾಗ ಸರಿಯಾದ ಉತ್ತರ ಸಿಗಲಿಲ್ಲ. ಚರ್ಚೆಯ ವೇಳೆ ಬಿಜೆಪಿಯ ಶ್ರೀ?ರಾಮುಲು, ಜನಾರ್ಧನರೆಡ್ಡಿ ಮತ್ತಿತರರು ನೀವು ಬಳ್ಳಾರಿಗೆ ಬನ್ನಿ, ನೋಡಿಕೊಳ್ಳುತ್ತೇ?ವೆ ಎಂದು ಸವಾಲು ಹಾಕಿದ್ದರು. ಅದನ್ನು ಸ್ವೀಕರಿಸಿದ ನಾನು ನಡೆದುಕೊಂಡೇ ಬಳ್ಳಾರಿಗೆ ಬರುತ್ತೇನೆ ಎಂದು ಹೇಳಿ ಪಾದಯಾತ್ರೆ ನಡೆಸಿದ್ದಾಗಿ ಸಿದ್ದರಾಮಯ್ಯ ತಿಳಿಸಿದರು.ಎಚ್.ಕೆ.ಪಾಟೀಲ್‌ರವರ ಪತ್ರ ಕುರಿತು ಚರ್ಚೆ ನಡೆಸುವುದಾಗಿ ಅವರು ಹೇಳಿದರು.ದೆಹಲಿಗೆ ಭೇಟಿ ನೀಡುತ್ತಿರುವ ತಾವು ಪ್ರಧಾನಮಂತ್ರಿ ಭೇಟಿಗೆ ಸಮಯ ಕೇಳಿದ್ದೇನೆ. 16ನೇ ಹಣಕಾಸು ಆಯೋಗದ ಅಧ್ಯಕ್ಷರನ್ನು ಭೇಟಿ ಮಾಡಿದ ವೇಳೆ ಕೆಲ ವಿಷಯಗಳ ಚರ್ಚೆಯಾಗಿವೆ. ಅದರ ಬಗ್ಗೆ ಪ್ರಧಾನಮಂತ್ರಿ ಗಮನ ಸೆಳೆಯಲು ಸಮಯ ಕೇಳಿದ್ದೇನೆ. ರಾಜ್ಯದ ಬಹಳಷ್ಟು ಮಸೂದೆಗಳು ಬಾಕಿ ಇದ್ದು, ಅದರ ಬಗ್ಗೆ ಗಮನ ಹರಿಸಲು ರಾಷ್ಟ್ರಪತಿಯವರಿಗೆ ಮನವಿ ಸಲ್ಲಿಸಲು ಸಮಯ ಕೇಳಲಾಗಿತ್ತು. ರಾಷ್ಟ್ರಪತಿಯವರು ನಾಳೆ ಬೆಳಿಗ್ಗೆ 11.20 ಕ್ಕೆ ಸಮಯ ನೀಡಿದ್ದಾರೆ ಎಂದರು.

# ರಾಜ್ಯದಲ್ಲಿ ಶೀಘ್ರವೇ ಜಲಾಶಯಗಳು ಭರ್ತಿ.!

**ಬೆಂಗಳೂರು,ಜೂ.23–** ನಿರಂತರ ಮಳೆಯಿಂದಾಗಿ ಕೆಆರ್‌ಎಸ್ ಜಲಾಶಯದಲ್ಲಿ ನೀರಿನ ಮಟ್ಟ 120 ಅಡಿಗೂ ಹೆಚ್ಚಿದೆ. ಗರಿಷ್ಠ 124.80 ಅಡಿ ಸಾಮರ್ಥ್ಯವಿರುವ ಈ ಜಲಾಶಯಕ್ಕೆ ಒಳಹರಿವು 13,856 ಕ್ಯೂಸೆಕ್ಸ್ ನಷ್ಟು ಇದ್ದು ಸದ್ಯದಲ್ಲೆ ಭರ್ತಿಯಾಗುವ ಸಾಧ್ಯತೆಗಳಿವೆ. ಕೊಡಗು, ಚಿಕ್ಕಮಗಳೂರು, ಕೇರಳ ಭಾಗದಲ್ಲಿ ಮುಂಗಾರು ಮಳೆ ವ್ಯಾಪಕ ಪ್ರಮಾಣದಲ್ಲಿ ಬೀಳುತ್ತಿದ್ದು, ಇದರಿಂದ ನದಿಗಳ ನೀರಿನ ಮಟ್ಟ ಏರಿಕೆಯಾಗಿದೆ. ಅದೇ ರೀತಿ ಜಲಾಶಯದ ಒಳಹರಿವು ನಿರಂತರವಾಗಿ ಏರಿಕೆಯಾಗುತ್ತಿದೆ.

ಕರ್ನಾಟಕ ರಾಜ್ಯ ನೈಸರ್ಗಿಕ ವಿಕೋಪ ಉಸ್ತುವಾರಿ ಕೇಂದ್ರದ ಮಾಹಿತಿ ಪ್ರಕಾರ, 49.45 ಟಿಎಂಸಿ ಅಡಿ ಗರಿಷ್ಠ ಸಾಮರ್ಥ್ಯವಿರುವ ಕೆಆರ್‌ಎಸ್ ಜಲಾಶಯದಲ್ಲಿ 43.30 ಟಿಎಂಸಿ ಅಡಿ ನೀರು ಸಂಗ್ರಹವಾಗಿದೆ. ಶೇ.88ರಷ್ಟು ಈಗಾಗಲೇ ನೀರು ಸಂಗ್ರಹವಾಗಿದೆ.

ಕಳೆದ ವರ್ಷ ಇದೇ ಅವಧಿಯಲ್ಲಿ 14.57 ಅಡಿಯಷ್ಟು ಮಾತ್ರ ನೀರು ಸಂಗ್ರಹವಾಗಿತ್ತು. ಜೂನ್ ತಿಂಗಳಿನಲ್ಲೆ? ಕಾವೇರಿ ಕೊಳ್ಳದ ಜಲಾಶಯಗಳು ಭರ್ತಿಯಾಗುವ ಸಾಧ್ಯತೆಗಳಿದ್ದು, ಕುಡಿಯುವ ನೀರು ಹಾಗೂ ರೈತರ ಬೆಳೆಗಳಿಗೆ ನೀರಿನ ಸಮಸ್ಯೆ ನಿವಾರಣೆಯಾದಂತಾಗಿದೆ.

ಕಾವೇರಿ ಜಲಾನಯನ ಭಾಗದಲ್ಲಿ ಎಡೆಬಿಡದೆ ಮಳೆ ಸುರಿಯುತ್ತಿರುವುದರಿಂದ ಜಲಾಶಯಗಳಿಗೆ ಒಳಹರಿವು ನಿರಂತರವಾಗಿದೆ.

ಹಾರಂಗಿ ಜಲಾಶಯ ಶೇ.74, ಹೇಮಾವತಿ ಶೇ.83, ಕಬಿನಿ ಜಲಾಶಯ ಶೇ.81ರಷ್ಟು ಭರ್ತಿಯಾಗಿದ್ದು, ಒಟ್ಟಾರೆ ನಾಲ್ಕೂ ಜಲಾಶಯಗಳಲ್ಲಿ ಶೇ.84ರಷ್ಟು ನೀರಿದೆ.

ಕಳೆದ ವರ್ಷಕ್ಕೆ ಹೋಲಿಸಿದರೆ ಈ ಬಾರಿ ದುಪ್ಪಟ್ಟು ನೀರಿನ ಸಂಗ್ರಹವಿದೆ. ಜಲವಿದ್ಯುತ್ ಉತ್ಪಾದಿಸುವ ಲಿಂಗನಮಕ್ಕಿ, ವರಾಹಿ, ಸೂಫ ಜಲಾಶಯಗಳಿಗೂ ಒಳಹರಿವು ಹೆಚ್ಚಾಗಿದೆ. ಈ ಮೂರು ಜಲಾಶಯ ಗಳಿಂದ 38 ಸಾವಿರಕ್ಕೂ ಹೆಚ್ಚು ಕ್ಯೂಸೆಕ್ ನೀರು ಹರಿಯುತ್ತಿದ್ದು, ಒಟ್ಟಾರೆ ಶೇ.31ರಷ್ಟು ಭರ್ತಿ ಯಾಗಿವೆ.



ಕೃಷ್ಣ ಕೊಳ್ಳದ ಭದ್ರ, ತುಂಗಭದ್ರ, ಘಟ್ಟಪ್ರಭ, ಹಾಲಮಟ್ಟಿ, ನಾರಾಯಣಪುರ ಜಲಾಶಯಗಳಿಗೂ ಸಾಕಷ್ಟು ಒಳಹರಿವಿದೆ. ಈ ಜಲಾಶಯಗಳಲ್ಲಿ ಒಟ್ಟಾರೆ ಶೇ.51ರಷ್ಟು ನೀರು ಸಂಗ್ರವಾಗಿದ್ದು, ಒಳಹರಿವುಸು 1,45,000 ಕ್ಯೂಸೆಕ್‌ಗೂ ಹೆಚ್ಚಿದೆ.

ಆಲಮಟ್ಟಿ ಜಲಾಶಯ ಶೇ.61ರಷ್ಟು , ನಾರಾಯಣಪುರ ಜಲಾಶಯ ಶೇ.78ರಷ್ಟು ಭರ್ತಿಯಾಗಿವೆ. ಆಲಮಟ್ಟಿ ಜಲಾಶಯಕ್ಕೆ 98 ಸಾವಿರಕ್ಕೂ ಹೆಚ್ಚು ಒಳಹರಿವಿದ್ದು, 50 ಸಾವಿರ ಕ್ಯೂಸೆಕ್ ನೀರನ್ನು ಹೊರಬಿಡಲಾಗುತ್ತಿದೆ. ನಾರಾಯಣಪುರ ಜಲಾಶಯಕ್ಕೆ 51 ಸಾವಿರಕ್ಕೂ ಹೆಚ್ಚು ನೀರು ಹರಿದುಬರುತ್ತಿದ್ದು, 44 ಸಾವಿರ ಕ್ಯೂಸೆಕ್ ನೀರನ್ನು ನದಿಗೆ ಬಿಡಲಾಗುತ್ತಿದೆ.

## ವೈದ್ಯಪದವಿ ಪಡೆದ ಡಾ.ಚೈತ್ರ ಪತ್ತಾರ್ ರವರಿಗೆ ಸನ್ಮಾನ



**ಯುವ ಮಾರ್ಗ ಸುದ್ದಿ**

**ಮಾನ್ವಿ,ಜೂ.13–**ಪಟ್ಟಣದ ಶ್ರೀ ಮೌನೇಶ್ವರ ಸೇವಾ ಸಮಿತಿ ವತಿಯಿಂದ ಇ.ಎಸ್.ಐ.ಸಿ, ಮೆಡಿಕಲ್ ಕಾಲೇಜ್ ಗುಲಬರ್ಗದಲ್ಲಿ ವೈದ್ಯ ಪದವಿಯನ್ನು ಪಡೆದ ಪಟ್ಟಣದ ಗವಿಯಪ್ಪ ಪತ್ತಾರ್ ಬಾಗಲವಾಡ ರವರ ಪುತ್ರಿ ಡಾ.ಚೈತ್ರ ಪತ್ತಾರ್ ರವರನ್ನು ಅವರ ನಿವಾಸದಲ್ಲಿ ಸಮಾಜದ ಪರವಾಗಿ ಮುಖಂಡರಾದ ಷಣ್ಮುಖ ಆಚಾರಿ ಚೀಕಲಪರ್ವಿ ತೆರಿಗೆ ಸಲಹೆಗಾರರು ಸನ್ಮಾನಿಸಿ ಗೌರವಿಸಿ ಮಾತನಾಡಿ ವಿಶ್ವಕರ್ಮ ಸಮಾಜದವರು ತಮ್ಮ ಪಂಚ ಕುಲವೃತ್ತಿಯೊಂದಿಗೆ ತಮ್ಮ ಮಕ್ಕಳಿಗೆ ಉನ್ನತ ಶಿಕ್ಷಣವನ್ನು ಕೋಡಿಸುವ ಮೂಲಕ ಉತ್ತಮ ಜೀವನವನ್ನು ರೂಪಿಸಿಕೊಳ್ಳುವುದಕ್ಕೆ ಅಗತ್ಯ ಪ್ರೋತ್ಸಾಹ ನೀಡುವುದು ಅವಶ್ಯವಾಗಿದೆ ಎಂದು ತಿಳಿಸಿದರು.

ಶ್ರೀ ಮೌನೇಶ್ವರ ಸೇವಸಮಿತಿಯ ತಾ.ಅಧ್ಯಕ್ಷರಾದ ಮೋಹನ್ ಆಚಾರಿ, ವಿಶ್ವಕರ್ಮ ಸಮಾಜದ ಮಾಜಿ ಜಿಲ್ಲಾಧ್ಯಕ್ಷರಾದ ಮನೋಹರ್ ವಿಶ್ವಕರ್ಮ ವಕೀಲರು, ನಾಗನಗೌಡ ಸೇರಿದಂತೆ ಇನ್ನಿತರರು ಇದ್ದರು.

## ಗಾಂಜಾ ಮಾರಾಟ: ಓರ್ವನ ಬಂಧನ

**ಕಲಬುರಗಿ,ಜೂ.23–**ಅನಧಿಕೃತವಾಗಿ ಗಾಂಜಾ ಸಂಗ್ರಹಿಸಿ ಮಾರಾಟ ಮಾಡಲು ಯತ್ನಿಸುತ್ತಿದ್ದ ವ್ಯಕ್ತಿಯೊಬ್ಬನನ್ನು ಸಬ್ ಅರ್ಬನ್ ಪೊಲೀಸ್ ಠಾಣೆಯ ಪಿಐ ಸಂತೋಷ ಎಲ್.ಟಿ. ಮತ್ತು ಅಪರಾಧ ವಿಭಾಗದ ಸಿಬ್ಬಂದಿಗಳಾದ ಮಲ್ಲಿಕಾರ್ಜುನ ಮತ್ತು ಮಂಜುನಾಥ ಅವರು ಬಂಧಿಸಿದ್ದಾರೆ.

ಕೃಷ್ಣಾ ಕಾಲೋನಿಯ ಅಬ್ದುಲ್ ರಹೀಮ್ ಅಲಿಯಾಸ್ ಏಜಾಜ್ ತಂದೆ ಅಬ್ದುಲ್ ಘನ್ನಿ (22) ಎಂಬಾತನನ್ನು ಬಂಧಿಸಿ 16000 ರೂ.ಮೌಲ್ಯದ 164 ಗ್ರಾಂ. ಗಾಂಜಾ ಜಪ್ತಿ ಮಾಡಿದ್ದಾರೆ. ಅಬ್ದುಲ್ ಖಯೂಮ್ ತಂದೆ ಅಬ್ದುಲ್ ಅಜೀಮ್ (24) ಎಂಬಾತ ಪರಾರಿಯಾಗಿದ್ದಾನೆ.

ಇವರು ಸೊಲ್ಲಾಪುರದಿಂದ ಗಾಂಜಾ ಖರೀದಿ ಮಾಡಿ ಅನಧಿಕೃತವಾಗಿ ಸಂಗ್ರಹಿಸಿ ಇಟ್ಟುಕೊಂಡು ಮಾರಾಟ ಮಾಡುತ್ತಿದ್ದರು ಎಂದು ತಿಳಿದುಬಂದಿದೆ.

ಸಬ್–ಅರ್ಬನ್ ಪೊಲೀಸ್ ಠಾಣೆಯಲ್ಲಿ ಪ್ರಕರಣ ದಾಖಲಾಗಿದೆ.

## ಪತ್ನಿ ಸಾವಿನಿಂದ ನೊಂದು ಪತಿ ಆತ್ಮಹತ್ಯೆ

**ಕಲಬುರಗಿ,ಜೂ.23–**ಪತ್ನಿ ಸಾವಿನಿಂದ ನೊಂದು ಪತಿ ನೇಣು ಹಾಕಿಕೊಂಡು ಆತ್ಮಹತ್ಯೆ ಮಾಡಿಕೊಂಡಿರುವ ಘಟನೆ ಹೀರಾಪುರದಲ್ಲಿ ನಡೆದಿದೆ.

ಸಂತೋಷ ತಂದೆ ಅರ್ಜುನ ಮ್ಯಾಗೇರಿ (27) ಆತ್ಮಹತ್ಯೆ ಮಾಡಿಕೊಂಡವರು.

ಸಂತೋಷಗೆ ಮಾತು ಬರುತ್ತಿರಲಿಲ್ಲ. ನದಿಸಿನ್ನೂರ ಗ್ರಾಮದ ಶೋಭಾ ಎಂಬುವವರ ಜೊತೆ ಮದುವೆ ಮಾಡಲಾಗಿತ್ತು. ಆದರೆ ಶೋಭಾ ಮದುವೆಯಾದ 20 ದಿನಗಳಲ್ಲಿಯೇ ನೇಣು ಹಾಕಿಕೊಂಡು ಆತ್ಮಹತ್ಯೆ ಮಾಡಿಕೊಂಡಿದ್ದು, ಇದರಿಂದ ತೀವ್ರವಾಗಿ ನೊಂದಿದ್ದ ಸಂತೋಷ ಮನೆಯಲ್ಲಿರುವ ಫ್ಯಾನಿಗೆ ಸೀರೆಯಿಂದ ನೇಣು ಹಾಕಿಕೊಂಡು ಆತ್ಮಹತ್ಯೆ ಮಾಡಿಕೊಂಡಿದ್ದಾನೆ ಎಂದು ತಿಳಿದುಬಂದಿದೆ.

ಈ ಸಂಬಂಧ ಮೃತನ ತಾಯಿ ಶಾಂತಮ್ಮ ಮ್ಯಾಗೇರಿ ಅವರು ಅಶೋಕ ನಗರ ಪೊಲೀಸ್ ಠಾಣೆಯಲ್ಲಿ ದೂರು ಸಲ್ಲಿಸಿದ್ದಾರೆ.

## ಫೋಟೊ ಸುದ್ದಿ



ನ್ಯಾಷನಲ್ ಪೀಪಲ್ಸ್ ಪಾರ್ಟಿಯ ಚಿಕ್ಕಪಟ್ಟಿ ಕ್ಷೇತ್ರ ಅಧ್ಯಕ್ಷರು ಸೀತಾ ಲಕ್ಷ್ಮಿ ಅವರ ನಾಯಕತ್ವದಲ್ಲಿ ಕರ್ನಾಟಕ ದಲಿತ ಸಂಘರ್ಷ ಸಮಿತಿ ರಾಜ್ಯ ಅಧ್ಯಕ್ಷರಾದ ನಾರಾಯಣ್ ಮತ್ತು ವಿಟ್ಟಲ್ ಪವರ್ ಅವರೊಂದಿಗೆ ರಾಜ್ಯ ಪ್ರಧಾನ ಕಾರ್ಯದರ್ಶಿ ಪ್ರಭು ಬಾಸ್ಕೊ ಮತ್ತು ಬಾಬುರಾಜ್ ಅವರೊಂದಿಗೆ ಎನ್‌ಪಿಪಿ ಪಕ್ಷದ ಸಂಘಟನೆ ಬಗ್ಗೆ ಚರ್ಚಿಸಿದರು.

# ಜಿಲ್ಲೆಯ ಏಳು ಗ್ರಾಮ ಪಂಚಾಯತಿಗಳು ಕ್ಷಯರೋಗ ಮುಕ್ತ: ಸಿಇಓ ಪ್ರಶಂಸೆ



**ಯುವ ಮಾರ್ಗ ಸುದ್ದಿ**

**ರಾಯಚೂರು,ಜೂ.23–**ರಾಷ್ಟ್ರೀಯ ಕ್ಷಯರೋಗ ನಿರ್ಮೂಲನಾ ಕಾರ್ಯ ಕ್ರಮದಡಿಯಲ್ಲಿ 2024ನೇ ಸಾಲಿನಲ್ಲಿ ರಾಯಚೂರು ಜಿಲ್ಲೆಯ 7 ಗ್ರಾಮ ಪಂಚಾಯತಿಗಳು ರಾಷ್ಟ್ರಮಟ್ಟದಿಂದಲ್ಲೇ ಕ್ಷಯಮುಕ್ತ ಗ್ರಾಮ ಪಂಚಾಯತಿಯಾಗಿ ಅಧಿಕೃತವಾಗಿ ಅರ್ಹತೆ ಪಡೆದುಕೊಂಡಿರುವುದಕ್ಕೆ ಜಿಲ್ಲಾ ಪಂಚಾಯತ್ ಮುಖ್ಯ ಕಾರ್ಯನಿರ್ವಾಹಕ ಅಧಿಕಾರಿಗಳಾದ ರಾಹುಲ್ ತುಕಾರಾಂ ಪಾಂಡ್ವೆ ಅವರು ಪ್ರಶಂಸೆ ವ್ಯಕ್ತಪಡಿಸಿದ್ದಾರೆ.

ಅವರು ಇತ್ತೀಚಿಗೆ ನಡೆದ ಜಿಲ್ಲಾ ಆರೋಗ್ಯ ಸಮಿತಿ ಸಭೆಯಲ್ಲಿ ಚರ್ಚಿಸಿದಂತೆ ರಾಷ್ಟ್ರೀಯ ಕ್ಷಯರೋಗ ನಿರ್ಮೂಲನಾ ಕಾರ್ಯಕ್ರಮದಡಿಯಲ್ಲಿ ಜಿಲ್ಲೆಯ ಏಳು ಗ್ರಾಮ ಪಂಚಾಯತಿಗಳಾದ ಅಮರಾಪೂರು, ಶಾವಂತಗೇರಾ, ಮಾರಲದಿನ್ನಿ, ಭೂತಲದಿನ್ನಿ, ಗಾಂಧೀನಗರ, ಯದ್ಲಾಪೂರು ಪಂಚಾಯತಗಳು ರಾಷ್ಟ್ರಮಟ್ಟದಿಂದಲ್ಲೇ ಕ್ಷಯ ಮುಕ್ತ ಗ್ರಾಮ ಪಂಚಾಯತ್ ಆಗಿ ಅಧಿಕೃತವಾಗಿ ಅರ್ಹತೆ ಪಡೆದುಕೊಂಡಿರುವುದಕ್ಕೆ ಶ್ಲಾಘನೆ ವ್ಯಕ್ತಪಡಿಸಿದ್ದಾರೆ.

ಜಿಲ್ಲಾ ಆರೋಗ್ಯ ಮತ್ತು ಕುಟುಂಬ ಕಲ್ಯಾಣಾಧಿಕಾರಿಯಾದ ಸುರೇಂದ್ರ ಬಾಬು ಅವರು ಮಾತನಾಡಿ. ಕ್ಷಯರೋಗ ನಿಯಂತ್ರಣ ಕಾರ್ಯಕ್ರಮದ ಅಂಕಿ ಅಂಶಗಳ ಕುರಿತು ಮಾಹಿತಿಯನ್ನು ವಿವರಿಸುತ್ತಾ 2 ವಾರಕ್ಕಿಂತ ಹೆಚ್ಚು ಕೆಮ್ಮು, ಸಂಜೆ ವೇಳೆ ಜ್ವರ, ಹಸಿವಾಗದೇ ಇರುವುದು, ತೂಕ ಕಡಿಮೆ ಆಗುವುದು ಈ ಲಕ್ಷಣಗಳು ಕಂಡು ಬಂದಂತವರಿಗೆ ಸಿಬಿನ್ಯಾಟ್ ಪರೀಕ್ಷೆಯ ಮುಖಾಂತರ ಒಟ್ಟು 67,338 ಕಫ ಪರೀಕ್ಷೆ ಮಾಡಲಾಗಿದೆ. ಕಫ ಪರೀಕ್ಷೆ ಮಾಡಿದ ಮಾದರಿಗಳಲ್ಲಿ ಒಟ್ಟು 4,677 ಕ್ಷಯರೋಗ ದೃಡಪಟ್ಟಿರುತ್ತವೆ. ಎಕ್ಸರೇ ಪರೀಕ್ಷೆಯ ಮುಖಾಂತರ ಒಟ್ಟು 5790 ಎಕ್ಸರೇ ಪರೀಕ್ಷೆಯನ್ನು ಮಾಡಿದಾಗ ಇವುಗಳಲ್ಲಿ ಒಟ್ಟು 176 ಕ್ಷಯರೋಗ ದೃಡಪಟ್ಟಿರುತ್ತವೆ. ಸದರಿ ಕ್ಷಯರೋಗ ದೃಡಪಟ್ಟವರನ್ನು ಪತ್ತೆ ಹಚ್ಚಿ ಸೂಕ್ತ ಚಿಕಿತ್ಸೆಯನ್ನು ನೀಡಲಾಗಿದೆ ಎಂದು ತಿಳಿಸಿದರು.

2024ನೇ ಸಾಲಿನಲ್ಲಿ 100 ದಿನಗಳ ಕ್ಷಯರೋಗ ಅಭಿಯಾನದಲ್ಲಿ ಪ್ರತಿ ಗ್ರಾಮ ಪಂಚಾಯತ್ ನಲ್ಲಿ ಕ್ಷಯರೋಗದ ಕುರಿತು ಐ.ಇ.ಸಿ. ಪ್ರಕಟಣೆಯೊಂದಿಗೆ ಜನರಲ್ಲಿ ಕ್ಷಯರೋಗದ ಆರೋಗ್ಯ, ಶಿಕ್ಷಣದ ಮಾಹಿತಿಯನ್ನು ನೀಡಲಾಗಿರುತ್ತದೆ. 100 ದಿನಗಳ ಕ್ಷಯರೋಗ ಅಭಿಯಾನ ಅಂಗವಾಗಿ ಜಿಲ್ಲೆಯ ಎಲ್ಲಾ ಗ್ರಾಮಗಳಲ್ಲಿ ಕ್ಷಯರೋಗ ಪರೀಕ್ಷೆಯನ್ನು ಮಾಡಲಾಗಿರುತ್ತದೆ ಹಾಗೂ ಈ ಅಭಿಯಾನದಲ್ಲಿ ಒಟ್ಟು 6,154 ಕಫ ಪರೀಕ್ಷೆ ಮಾಡಿದಾಗ ಅದರಲ್ಲಿ ಒಟ್ಟು 667 ಕ್ಷಯರೋಗಿಗಳನ್ನು ಪತ್ತೆ ಹಚ್ಚಿ ಸೂಕ್ತ ಚಿಕಿತ್ಸೆ ನೀಡಲಾಗಿದೆ.

ಕ್ಷಯ ರೋಗ ಕಾರ್ಯಕ್ರಮದ ಅಡಿಯಲ್ಲಿ ಗ್ರಾಮೀಣ ಮಟ್ಟದ ಜನರಲ್ಲಿ ಕ್ಷಯ ರೋಗ ಲಕ್ಷಣಗಳು ಕಂಡು ಬಂದರೆ, ತ್ವರಿತವಾಗಿ ಪರೀಕ್ಷೆ ಮಾಡಲು ಎಲ್ಲಾ ತಾಲೂಕು ಮಟ್ಟದಲ್ಲಿ ಮತ್ತು ಸಮುದಾಯ ಆರೋಗ್ಯ ಕೇಂದ್ರ ಮಟ್ಟದಲ್ಲಿ ಕಫಪರೀಕ್ಷೆ ಮಾಡು ವ ಯಂತ್ರಗಳನ್ನು ಅಳವಡಿಸಲಾಗಿರುತ್ತದೆ, ಕ್ಷಯ ರೋಗ ಪತ್ತೆಹ ಚ್ಚಲು ಎದೆ ಗೂಡಿನ ಎಕ್ಸರೇ ತೆಗೆಯಲು, ವಿಶೇ ಷ ವಾಹನದ ವ್ಯವಸ್ಥೆಯನ್ನು ಮಾಡಲಾಗಿರುತ್ತದೆ ಎಂದು ಜಿಲ್ಲಾ ಆರೋಗ್ಯ ಮತ್ತು ಕುಟುಂಬ ಕಲ್ಯಾಣಾಧಿಕಾರಿ ಅವರು ತಿಳಿಸಿದರು.

# ಕೌಶಲ್ಯಾಭಿವೃದ್ಧಿ ತರಬೇತಿ ಪೂರ್ಣ: ಪ್ರಮಾಣ ಪತ್ರ ವಿತರಣೆ



**ಯುವ ಮಾರ್ಗ ಸುದ್ದಿ**

**ಸಿಂಧನೂರು,ಜೂ.23–**ತಾಲೂಕಿನ ಸುಲ್ತಾನಪೂರ ಗ್ರಾಮದಲ್ಲಿ ಜೀವನ್ ಪ್ರಕಾಶ ಚಾರಿಟೇಬಲ್ ಸೊಸೈಟಿ ಮತ್ತು ಬ್ಲ್ಯೂ ಪೈನ್ ಸೋಲಾರ್ ಆಶ್ರಯದಲ್ಲಿ ಆಯೋಜಿಸಿದ್ದ ಕೌಶಲ್ಯಾಭಿವೃದ್ಧಿ ತರಬೇತಿ ಕಾರ್ಯಕ್ರಮದಡಿಯಲ್ಲಿ 63 ವಿದ್ಯಾರ್ಥಿಗಳಿಗೆ ಉಚಿತ ಆರು ತಿಂಗಳ ಸೋಲಾರ್ ಟೆಕ್ನಿಷಿಯನ್ ತರಬೇತಿಯನ್ನು ಯಶಸ್ವಿಯಾಗಿ ಪೂರೈಸಿದ ಪ್ರಶಿಕ್ಷಣಾರ್ಥಿಗಳಿಗೆ ವಿಶೇಷ ಸಮಾರಂಭದ ಮೂಲಕ ಪ್ರಮಾಣಪತ್ರಗಳನ್ನು ವಿತರಿಸಲಾಯಿತು.

ಈ ಸಂದರ್ಭದಲ್ಲಿ ಮುಖ್ಯ ಅತಿಥಿಯಾಗಿ ಭಾಗವಹಿಸಿದ್ದ ಬ್ಲ್ಯೂ ಪೈನ್ ಸೋಲಾರ್ ಎನರ್ಜಿಯ ಪ್ರಭಾಕರ, ಅವರು ವಿದ್ಯಾರ್ಥಿಗಳಿಗೆ ಪ್ರಮಾಣಪತ್ರ ವಿತರಿಸಿ ಮಾತನಾಡಿದ ಅವರು ಪ್ರಸ್ತುತ ಕಾಲಘಟ್ಟದಲ್ಲಿ ವಿದ್ಯೆಯ ಜೊತೆಗೆ ಕೌಶಲ್ಯ ಇದ್ದಾಗ ಜೀವನದ ದಾರಿಯಲ್ಲಿ ಯಾವುದೇ ಆತಂಕಗಳು ಇರುವುದಿಲ್ಲ ಹೀಗಾಗಿ ಸ್ವಂತ ದುಡಿಮೆ ಮಾಡಲು ಹಲವಾರು ಅವಕಾಶಗಳಿದ್ದು, ತಮ್ಮ ಇಚ್ಛಾಶಕ್ತಿ, ಕೆಲಸದಲ್ಲಿ ಶ್ರದ್ಧೆ ಇದ್ದರೆ ಉದ್ಯೋಗಾವಕಾಶ ದೊರೆಯಲಿವೇ ಈ ತರಬೇತಿಯಿಂದ ನೀವು ಸ್ವಾವಲಂಬಿಯಾಗಿ ಧೈರ್ಯದಿಂದ ದುಡಿದು ನಿಮ್ಮ ಕುಟುಂಬಕ್ಕೂ ಸಮಾಜಕ್ಕೂ ಪ್ರೋತ್ಸಾಹ ಬೆಳಕಾಗಬೇಕು ಎಂದು ನೀಡಿದರು.

ಈ ಕಾರ್ಯಕ್ರಮದ ಅಧ್ಯಕ್ಷತೆಯನ್ನು ಬ್ಲೂಪೈನ್ ಎನರ್ಜಿ ಕಂಪನಿ ಸಿ.ಎಸ್.ರ್ ಎಕ್ಸಿಕ್ಯೂಟಿವ್ ಲಕ್ಷ್ಮಿಧರ ಧುಬೆ ವಹಿಸಿದ್ದರು. ಕೋಆರ್ಡಿನೇಟರ್ ಪವನಕುಮಾರ್ ಅವರು ಕಾರ್ಯಕ್ರಮದ ಹಿನ್ನೆಲೆಯನ್ನು ವಿವರಿಸಿ ಪ್ರಾಸ್ತಾವಿಕ ಭಾಷಣ ಮಾಡಿದರು. ತರಬೇತಿದಾರ ಎಂ, ಡಿ ಸಿರಾಜುದ್ದೀನ್ ಹಾಗೂ ಬೋಧಕ ಸುಹೇಲ್ ತರಬೇತಿ ಕುರಿತಾಗಿ ವಿಶ್ಲೇಷಣೆ ನೀಡಿದರು. ಕಾರ್ಯಕ್ರಮದಲ್ಲಿ ಬ್ಲೂಪೈನ್ ಸೈಟ್ ಇನ್ಚಾರ್ಜ್ ಪ್ರಭಾಕರನ್ ಜಿ, ರೇಸ್ ಇನ್ಫ್ರಾ ಕಂಪನಿಯ ಫತೇ ಸಿಂಗ್, ಬ್ಲೂಪೈನ್ ಸೆಕ್ಯೂರಿಟಿ ಇನ್ಚಾರ್ಜ್ ಸುರೇಶ್ ಸಿಂಧನೂರು ಹಾಗೂ ಗ್ರಾಮ ಪಂಚಾಯತ್ ಅಧ್ಯಕ್ಷರು, ಸದಸ್ಯರು, ಗ್ರಾಮ ಮುಖಂಡರು ಹಾಗೂ ವಿದ್ಯಾರ್ಥಿಗಳು ಉಪಸ್ಥಿತರಿದ್ದರು. ವಿದ್ಯಾರ್ಥಿ ನಿರ್ಮಲ, ಶೃತಿ, ಸ್ವಾಗತಿಸಿ, ಕುಮಾರಿ ಸ್ವಪ್ನ ಕಾರ್ಯಕ್ರಮ ನಿರೂಪಿಸಿ ವಂದಿಸಿದರು.

# ಇಡಿಆರ್‌ಟಿ ಟ್ರಸ್ಟ್ ನಿಂದ ಶಾಲಾ ಮಕ್ಕಳಿಗೆ ಶೈಕ್ಷಣಿಕ ಸಾಮಗ್ರಿಗಳ ವಿತರಣೆ



**ಯುವ ಮಾರ್ಗ ಸುದ್ದಿ**

**ರಾಯಚೂರು,ಜೂ.23–**ಇಡಿಆರ್‌ಟಿ ಟ್ರಸ್ಟ್ ಬೆಂಗಳೂರು ವತಿಯಿಂದ ಗಿಲ್ಲೇಸೂಗೂರು ಸರ್ಕಾರಿ ಮಾದರಿ ಹಿರಿಯ ಪ್ರಾಥಮಿಕ ಶಾಲೆಯ ವಿದ್ಯಾರ್ಥಿಗಳಿಗೆ ಶಾಲಾ ಬ್ಯಾಗ್‌ಗಳು, ನೋಟ್‌ಬುಕ್‌ಗಳು ಮತ್ತು ಕ್ರೀಡಾ ಸಾಮಗ್ರಿಗಳನ್ನು ದೇಣಿಗೆಯಾಗಿ ನೀಡಲಾಯಿತು.

ಟ್ರಸ್ಟ್‌ನ ಈ ಉಪಕ್ರಮವು ಶಾಲಾ ಮಕ್ಕಳಿಗೆ ಅಗತ್ಯ ಶೈಕ್ಷಣಿಕ ಸಂಪನ್ಮೂಲಗಳನ್ನು ಒದಗಿಸುವ ಮೂಲಕ ಅವರ ಕಲಿಕೆಗೆ ಪ್ರೋತ್ಸಾಹ ನೀಡುವ ಗುರಿ ಹೊಂದಿದೆ. ಈ ವಿತರಣಾ ಕಾರ್ಯಕ್ರಮದಲ್ಲಿ ಶಾಲೆಯ ಮುಖ್ಯ ಗುರುಗಳಾದ ಈಶ್ವರಯ್ಯ ಸರ್, ಟ್ರಸ್ಟ್‌ನ ಪ್ರತಿನಿಧಿ ಜೋಗಿ ರಾಘವೇಂದ್ರ ಗಾಣದಾಳ, ಸಹ ಶಿಕ್ಷಕಿ ಪ್ರತಿಮಾ ಮತ್ತು ಶಾಲೆಯ ಎಲ್ಲಾ ಶಿಕ್ಷಕ ವೃಂದದವರು ಉಪಸ್ಥಿತರಿದ್ದರು.

ಕಾರ್ಯಕ್ರಮದ ಅಧ್ಯಕ್ಷತೆ ವಹಿಸಿದ್ದ ಶಾಲೆಯ ಮುಖ್ಯ ಗುರುಗಳಾದ ಈಶ್ವರಯ್ಯ ಅವರು, ಇಡಿಆರ್‌ಟಿ ಟ್ರಸ್ಟ್‌ನ ಮುಖ್ಯಸ್ಥರಾದ ಡಾ. ಕೆ. ಎಂ. ಪ್ರಸನ್ನ ಕುಮಾರ್ ಮತ್ತು ರತ್ನಾ ಮೇಡಂ ಅವರಿಗೆ ತಮ್ಮ ಕೃತಜ್ಞತೆಗಳನ್ನು ಸಲ್ಲಿಸಿದರು. ರಾಘವೇಂದ್ರ ಕಾರ್ಯಕ್ರಮವನ್ನು ನಿರೂಪಿಸಿದರು.

## ಒಳ ಮೀಸಲಾತಿ ಜಾರಿಗಾಗಿ ತೀವ್ರ ಹೋರಾಟ



**ಬಳ್ಳಾರಿ, ಜೂ.23–** ಪರಿಶಿಷ್ಟ ಜಾತಿಗೆ ಒಳ ಮೀಸಲಾತಿ ವರ್ಗೀಕರಣ ಜಾರಿಗಾಗಿ ಈಗಾಗಲೇ ಹಲವು ರೀತಿಯ ಹೋರಾಟಗಳನ್ನು ಕೈಗೊಳ್ಳಲಾಗಿದೆ. ಇನ್ನು ಮುಂದೆ ಒಳ ಮೀಸಲಾತಿ ಪರ ಇರುವ ಎಲ್ಲ ರಾಜಕೀಯ ಪಕ್ಷಗಳ ಮುಖಂಡರು, ಸ್ವಾಮೀಜಿಗಳು, ಮಠಾಧೀಶರನ್ನು ಭೇಟಿಯಾಗುವುದರ ಜೊತೆಗೆ, ಹೆದ್ದಾರಿ ರಸ್ತೆಗಳನ್ನು ಬಂದ್ ಮಾಡುವ ಮೂಲಕ ರಾಜ್ಯ, ಕೇಂದ್ರ ಸರ್ಕಾರಗಳನ್ನು ಎಚ್ಚರಿಸಲಾಗುವುದು ಎಂದು ಒಳ ಮೀಸಲಾತಿ ಪಾದಯಾತ್ರೆ ತಂಡದ ಸಂಚಾಲಕ ಸದಸ್ಯ ಬಿ.ಆರ್.ಭಾಸ್ಕರ್ ಪ್ರಸಾದ್ ಹೇಳಿದರು.

ನಗರದ ಪತ್ರಿಕಾ ಭವನದಲ್ಲಿ ಸುದ್ದಿಗೋಷ್ಠಿ ನಡೆಸಿ, ಪರಿಶಿಷ್ಟ ಜಾತಿಯಲ್ಲಿ ಒಳಮೀಸಲಾತಿಗಾಗಿ ಮಾದಿಗ ಸಮುದಾಯ ಕಳೆದ 35 ವರ್ಷಗಳಿಂದ ಹೋರಾಟ ಮಾಡುತ್ತಾ ಬಂದಿದೆ. ಈ ಮೊದಲು ಕೇಂದ್ರದಲ್ಲಿ ತಿದ್ದುಪಡಿಯ ನೆಪ ಹೇಳುತ್ತಿದ್ದ ರಾಜ್ಯ ಸರ್ಕಾರಗಳು, ಕಳೆದ 2023 ರ ಆಗಸ್ಟ್ 1 ರಂದು ಸುಪ್ರೀಂ ಕೋರ್ಟ್ ಆದೇಶ ನೀಡಿದಾಕ್ಷಣ ನೆರೆಯ ಆಂಧ್ರಪ್ರದೇಶ, ತೆಲಂಗಾಣದಲ್ಲಿ ಒಳಮೀಸಲಾತಿ ಜಾರಿಯಾಗಿದೆ. ಆದರೆ, ರಾಜ್ಯ ಸರ್ಕಾರ ಒಳಮೀಸಲಾತಿ ನೀಡಲು ದತ್ತಾಂಶಕ್ಕಾಗಿ ಸಮೀಕ್ಷೆಗಳ ನೆಪವೊಡ್ಡುತ್ತಿದೆ. ಇದಕ್ಕಾಗಿ ನಿವೃತ್ತ ನ್ಯಾಯಾಧೀಶ ನಾಗಮೋಹನ್ ದಾಸ್ ಅವರ ಏಕಸದಸ್ಯ ಸಮಿತಿಯ ಸಮೀಕ್ಷೆ ವರದಿಗೆ ಜೂ.22 ಕೊನೆಯ ದಿನವಾಗಿತ್ತು. ಇದೀಗ ಅದನ್ನು ಪುನಃ ಜೂ.30ಕ್ಕೆ ಮುಂದುವರೆಸಲಾಗಿದೆ. ಹಾಗಾಗಿ ಒಳಮೀಸಲಾತಿ ವಿರುದ್ಧ ಮುಂದಿನ ಹೋರಾಟದ ರೂಪುರೇಷೆಗಳ ಕುರಿತು ನಿನ್ನೆ ಬಳ್ಳಾರಿಯಲ್ಲಿ ಸಭೆ ಕರೆದು ಚರ್ಚಿಸಲಾಯಿತು ಎಂದರು.

ಒಳಮೀಸಲಾತಿಗಾಗಿ ಬಿಜೆಪಿಯಲ್ಲಿನ ಛಲವಾದಿ ನಾರಾಯಣ ಸ್ವಾಮಿ ಸೇರಿ ಎಲ್ಲ ರಾಜಕೀಯ ಪಕ್ಷಗಳಲ್ಲಿನ ಮುಖಂಡರನ್ನು ಮತ್ತು ಕುರುಬ, ವೀರಶೈವ, ಹೊಲೆಯ ಸಮುದಾಯಗಳ ಮಠಾಧೀಶರನ್ನು ಭೇಟಿಯಾಗಿ ಒಳಮೀಸಲಾತಿಗೆ ಬೆಂಬಲಿಸುವಂತೆ ಮನವಿ ಮಾಡಲಾಗುವುದು. ಜೊತೆಗೆ ರಾಷ್ಟ್ರೀಯ ಹೆದ್ದಾರಿಗಳನ್ನು ಬಂದ್ ಮಾಡಿ ಕೇಂದ್ರ ಸರ್ಕಾರಕ್ಕೆ ಎಚ್ಚರಿಕೆ ನೀಡಲಾಗುವುದು ಎಂದು ತಿಳಿಸಿದರು.

ಒಳಮೀಸಲಾತಿ ಸಮೀಕ್ಷೆ ನಡೆಸುತ್ತಿರುವ ನಾಗಮೋಹನ್ ದಾಸ್ ಅವರಿಗೆ ದತ್ತಾಂಶ ಎಂದರೆ ಗೊತ್ತಿಲ್ಲ. ಇದೀಗ ನಡೆಯುತ್ತಿರುವ ಆದಿ ದ್ರಾವಿಡ, ಆದಿ ಕರ್ನಾಟಕ ಸಮೀಕ್ಷೆಯಲ್ಲೂ ಜಾತಿವಾರು ಜನಸಂಖ್ಯೆ ಮಾಹಿತಿ ಲಭಿಸಲಿದೆ ಹೊರತು, ಸಮುದಾಯಗಳ ಆರ್ಥಿಕ, ಸಾಮಾಜಿಕ, ಶೈಕ್ಷಣಿಕ, ರಾಜಕೀಯ ಅಭಿವೃದ್ಧಿಗೆ ಸಂಬಂಧಿಸಿದ ದತ್ತಾಂಶ ಇರಲ್ಲ ಎಂದು ಅಸಮಾಧಾನ ವ್ಯಕ್ಯಪಡಿಸಿದ ಅವರು, ಅದಕ್ಕೆ ನಮಗೆ ಈ ಆಯೋಗವೇ ಬೇಕಿಲ್ಲ ಎಂದು ಅಸಮಾಧಾನ ವ್ಯಕ್ತಪಡಿಸಿದರು.

## ಮಾನವನ ಪ್ರಗತಿಗೆ ಮೌಲ್ಯಯುತ ವಿಚಾರಗಳುಪೂರಕ



**ಬಳ್ಳಾರಿ, ಜೂ. 23–** ಮೌಲ್ಯಯುತ ವಿಚಾರಗಳು ಮಾನವನ ಪ್ರಗತಿಗೆ ಪೂರಕ ಎಂದು ಬಳಗಾನೂರು ಶಿವಶಾಂತವೀರ ಶರಣರು ಹೇಳಿದ್ದಾರೆ.

ನಗರದ ಬಸವ ಭವನದಲ್ಲಿ ನಡೆದ ಚಿಕೇನಕೊಪ್ಪದ ಚನ್ನವೀರ ಶರಣರ 30ನೇ ಪುಣ್ಯ ಸ್ಮರಣೋತ್ಸವದ ಅಂಗವಾಗಿ 1008 ಮುತ್ತೈದೆಯರಿಗೆ ಉಡಿ ತುಂಬುವ, ತುಲಾಬಾರ ಹಾಗೂ ಉಚಿತ ನೇತ್ರ ಶಸ್ತ್ರ ಚಿಕಿತ್ಸಾ ಶಿಬಿರ ಉದ್ಘಾಟಿಸಿ ಮಾತನಾಡುತ್ತಿದ್ದರು.

ಮಹಾತ್ಮರು, ಶರಣರು, ಸಾಧುಗಳು ಮತ್ತು ಸಂತರ ಬದುಕಿನಲ್ಲಿ ನುಡಿಗಳಲ್ಲಿ ಮೌಲ್ಯಗಳು ಆದರ್ಶಗಳು ಮತ್ತು ಸಂಸ್ಕಾರಗಳು ಅಡಗಿರುತ್ತವೆ. ಮುಗ್ಧವಾದ ಭಕ್ತಿ, ಶ್ರದ್ಧೆಯ ಸ್ಮರಣೆ, ವಿಶ್ವಾಸಗಳಿಂದ ಮಹಾತ್ಮರನ್ನು ಶರಣರನ್ನು ಸ್ಮರಿಸಿದಲ್ಲಿ ಬದುಕು ಸಾರ್ಥಕತೆಯನ್ನು ಪಡೆಯುತ್ತದೆ ಎಂದರು.

ಯರನಾಳ ಹಿರೇಮಠ ಸಂಸ್ಥಾನದ ಶಿವಪ್ರಸಾದ ಶ್ರೀಗಳು ಮಾತನಾಡಿ, ಭೂಮಿಗಿಂತಲೂ ದೊಡ್ಡದ್ದವರು ತಾಯಿ. ತಾಯಿಯ ಸೇವೆಯನ್ನು ಮಾಡುವುದು ಸಾಕ್ಷಾತ್ ದೇವರ ಸೇವೆಯನ್ನು ಮಾಡಿದಂತೆ ಎಂದ ಅವರು, ಇಂದಿನ ದಿನಗಳಲ್ಲಿ ವಿದ್ಯೆ ಎಲ್ಲರಿಗೂ ಸಿಕ್ಕಿದ್ದು, ವಿನಯ ಮಾಯವಾಗಿದೆ. ವಿಜ್ಞಾನ ಅಭಿವೃದ್ಧಿ ಸಾಧಿಸಿದ್ದು ಅಜ್ಞಾನ ಪರಮಾವಧಿಯನ್ನು ತಲುಪಿದೆ. ಈ ನಿಟ್ಟಿನಲ್ಲಿ ಇಂದಿನ ಯುವಶಕ್ತಿಗೆ ವಿದ್ಯೆ, ವಿಜ್ಞಾನ, ವಿನಯ ಮತ್ತು ಪರಸ್ಪರರನ್ನು ಗೌರವಿಸುವ ಸಂಸ್ಕಾರವನ್ನು ಕಲಿಸಬೇಕಿದೆ ಎಂದರು.

ಮಾಜಿ ಸಚಿವ ಅಲ್ಲಂ ವೀರಭದ್ರಪ್ಪ ಅವರು, ಚಿಕೇನಕೊಪ್ಪ ಚನ್ನವೀರ ಶರಣರು ನಡೆದಾಡುವ ದೇವರು. ಅವರ ತಪಸ್ಸಿನ ಸಾಧನೆ ದೈವೀ ಶಕ್ತಿ ನಮ್ಮನ್ನೆಲ್ಲರನ್ನೂ ಇಲ್ಲಿ ಒಗ್ಗೂಡಿಸಿದೆ ಎಂದರು.

Owned, Printed and published by **ANILKUMAR H** from Plot No. # 3-5-415/-A MANVI Pooja Rice Mill, Near Kataraki Road, Manvi Tq. Manvi, Dist, Raichur-584123, Printed at **MAA FRIENDS PRINTING PRESS,** Plot No. # 3-5-415/-A Pooja Rice Mill Near Kataraki Road, Manvi Tq. Manvi, Dist: Raichur-584123, State: Karnataka Editor: **ANILKUMAR H**